ಗುರುವಾರ 06.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 92
Digital Varthe Kannada Daily
Volume 01 - Issue 92
Thursday 06.11.2025
Price: 5/- Rs
2 Pages Bangalore

PRGI/RNI: KNKAN/25/A1348


# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## 38 ರ ಮಹಿಳೆಯ ಕಾಮದಾಹಕ್ಕೆ 19 ವರ್ಷದ ಯುವಕ ಬಲಿ



**ಚಿಕ್ಕಬಳ್ಳಾಪುರ :** ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಮೂಡಚಿಂತಲಹಳ್ಳಿ ಗ್ರಾಮದಲ್ಲಿ ಯುವಕನೊಬ್ಬ ದುರ್ಘಟನಾತ್ಮಕವಾಗಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಸ್ಥಳೀಯರಲ್ಲಿ ಆಘಾತ ಮೂಡಿಸಿದೆ. ಈ ಆತ್ಮಹತ್ಯೆ ಹಿಂದೆ ಅಕ್ರಮ ಸಂಬಂಧ ಮತ್ತು ಹಿಂಸೆ ಕಾರಣವಾಗಿರಬಹುದು ಎಂಬ ಶಂಕೆ ವ್ಯಕ್ತವಾಗಿದ್ದು, ಇದೀಗ ಈ ಪ್ರಕರಣವು ವ್ಯಾಪಕ ಚರ್ಚೆಗೆ ಕಾರಣವಾಗಿದೆ.

ಮೃತನನ್ನು ಮೂಡಚಿಂತಲಹಳ್ಳಿಯ ನಿಖಿಲ್ ಕುಮಾರ್ (19) ಎಂದು ಗುರುತಿಸಲಾಗಿದೆ. ಕುಟುಂಬದವರ ಪ್ರಕಾರ, 38 ವರ್ಷದ ಶಾರದಾ ಎಂಬ ವಿವಾಹಿತ ಮಹಿಳೆ ನಿಖಿಲ್‌ನ್ನು ಅಕ್ರಮ ಸಂಬಂಧಕ್ಕಾಗಿ ಪದೇಪದೆ ಕಾಡುತ್ತಿದ್ದಳು. ಪೋಷಕರ ಮತ್ತು ಬಂಧುಗಳ ವಿರೋಧದ ನಡುವೆಯೂ ಶಾರದಾ ಯುವಕನ ಸಂಪರ್ಕವನ್ನು ಮುಂದುವರಿಸಿಕೊಂಡು, ಅವನನ್ನು ಮನೆಯಿಂದ ಹೊರಗೆ ಕರೆದುಕೊಂಡು ಹೋಗುತ್ತಿದ್ದಳು ಎಂಬುದು ಸ್ಥಳೀಯರ ಆರೋಪ.

ಮಾಹಿತಿ ಪ್ರಕಾರ, ಶಾರದಾ ಹಿಂದೆ ಗಂಡನಿಗೆ ವಿಚ್ಛೇದನ ನೀಡಿದ್ದಳು ಮತ್ತು ಇಬ್ಬರು ಮಕ್ಕಳೊಂದಿಗೆ ಅದೇ ಗ್ರಾಮದಲ್ಲಿ ವಾಸಿಸುತ್ತಿದ್ದಳು. ಈ ಸಮಯದಲ್ಲಿ ನಿಖಿಲ್ ಜೊತೆ ಪರಿಚಯ ಬೆಳೆಸಿಕೊಂಡು, ಬಳಿಕ ಆ ಸಂಬಂಧವು ಅಸಭ್ಯ ಮಾರ್ಗಕ್ಕೆ ತಿರುಗಿದಂತೆ ಹೇಳಲಾಗಿದೆ. ಯುವಕನಿಗೆ ಶಾರದಾ ನೀಡುತ್ತಿದ್ದ ಕಿರುಕುಳ ಮತ್ತು ಒತ್ತಡದಿಂದಾಗಿ ಅವನ ಮನಸ್ಸು ಅಶಾಂತವಾಗಿತ್ತು ಎಂದು ಮನೆಯವರು ತಿಳಿಸಿದ್ದಾರೆ.

ಘಟನೆ ನಡೆದ ದಿನ, ನಿಖಿಲ್ ಮನೆಯಿಂದ ಹೊರಟ ಬಳಿಕ ವಾಪಸ್ ಬಾರದಿದ್ದಾನೆ. ಹುಡುಕಾಟದ ವೇಳೆ ಚಿಂತಾಮಣಿ ತಾಲ್ಲೂಕಿನ ಕಾಚಹಳ್ಳಿ ಕೆರೆ ಬಳಿ ಮರಕ್ಕೆ ನೇಣು ಬಿಗಿದ ಸ್ಥಿತಿಯಲ್ಲಿ ಅವನ ಶವ ಪತ್ತೆಯಾಗಿದೆ. ಈ ಘಟನೆ ಕುರಿತು ಸ್ಥಳೀಯರಲ್ಲಿ ದುಃಖ ಮತ್ತು ಆಕ್ರೋಶ ಉಂಟಾಗಿದೆ.

ಮೃತನ ಪೋಷಕರು ಶಾರದಾ ವಿರುದ್ಧ ನಿಖಿಲ್‌ಗೆ ಮಾನಸಿಕ ಕಿರುಕುಳ ನೀಡಿದ್ದಾಳೆ ಎಂದು ಆರೋಪಿಸಿ ಚಿಂತಾಮಣಿ ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ಶಾರದಾ ವಿಚಾರಣೆಗಾಗಿ ಪೊಲೀಸರು ಕ್ರಮ ಕೈಗೊಂಡಿದ್ದು, ಯುವಕನ ಸಾವಿಗೆ ಕಾರಣವಾದ ನಿಜವಾದ ಕಾರಣವನ್ನು ಪತ್ತೆಹಚ್ಚುವ ಪ್ರಯತ್ನ ನಡೆದಿದೆ.

ಈ ಘಟನೆ ಪ್ರೇಮಸಂಬಂಧಗಳ ದುರುಪಯೋಗ ಮತ್ತು ಅಕ್ರಮ ಸಂಬಂಧಗಳಿಂದ ಉಂಟಾಗುವ ದುಃಖಕರ ಪರಿಣಾಮದ ಮತ್ತೊಂದು ಉದಾಹರಣೆಯಾಗಿದೆ ಎಂದು ಸ್ಥಳೀಯರು ವಿಷಾದ ವ್ಯಕ್ತಪಡಿಸಿದ್ದಾರೆ.

## ಆತ್ಮಹತ್ಯೆ ಮಾಡಿಕೊಳ್ಳಲು ಯತ್ನಿಸಿದ್ದ ವ್ಯಕ್ತಿ: ಸಿನಿಮೀಯ ರೀತಿಯಲ್ಲಿ ರಕ್ಷಿಸಿದ ಪೊಲೀಸರು



**ಮಂಗಳೂರು:** ಕೌಟುಂಬಿಕ ಕಲಹಕ್ಕೆ ಬೇಸತ್ತು ವರ್ಷದ ಮಗಳೊಂದಿಗೆ ಆತ್ಮಹತ್ಯೆಗೆ ಯತ್ನಿಸಿದ ವ್ಯಕ್ತಿಯನ್ನು ಮಂಗಳೂರು ಪೊಲೀಸ್ ಇಲಾಖೆ ಸಮಯಪ್ರಜ್ಞೆಯಿಂದ ರಕ್ಷಿಸಿದ ಘಟನೆ ಕಾವೂರು ಠಾಣಾ ವ್ಯಾಪ್ತಿಯ ಶಾಂತಿನಗರದಲ್ಲಿ ನಡೆದಿದೆ. ಕೌಟುಂಬಿಕ ಕಲಹದ ಕಾರಣ ತನ್ನ ಆರು ವರ್ಷದ ಮಗಳೊಂದಿಗೆ ತಣ್ಣೀರುಬಾವಿ ಬೀಚ್‌ನಲ್ಲಿ ವೀಡಿಯೋ ಮಾಡಿದ್ದು, ವೈರಲ್ ವೀಡಿಯೋ ಮೂಲಕವೇ ಆತನನ್ನು ಪತ್ತೆ ಹಚ್ಚಿದ ಪೊಲೀಸರು, ಆತನನ್ನು ರಕ್ಷಿಸಿದ್ದಾರೆ.

7 ವರ್ಷಗಳ ಹಿಂದೆ ಬಜ್ಪೆ ಪ್ರದೇಶದ ಯುವತಿಯನ್ನು ರಾಜೇಶ್ ಪ್ರೀತಿಸಿ ಮದುವೆಯಾಗಿದ್ದರು. ಆದರೆ ದಂಪತಿ ನಡವೆ ಇತ್ತೀಚೆಗೆ ಜಗಳಗಳು ಶುರುವಾಗಿದ್ದವು. ಹೆಚ್ಚಾದ ಕೌಟುಂಬಿಕ ಕಲಹದಿಂದ ಬೇಸತ್ತ ರಾಜೇಶ್, ಆತ್ಮಹತ್ಯೆ ಮಾಡಿಕೊಳ್ಳಲು ಮುಂದಾಗಿದ್ದರು.

ಮೊದಲಿಗೆ ತನ್ನ 6 ವರ್ಷದ ಮಗಳನ್ನು ಕರೆದುಕೊಂಡು ತಣ್ಣೀರುಬಾವಿ ಬೀಚ್‌ಗೆ ಹೋಗಿದ್ದರು. ಈ ವೇಳೆ ಸಾಯುವುದು ಬೇಡವೆಂದು ಪುಟ್ಟ ಮಗಳು ತನ್ನ ತಂದೆಗೆ ಅಂಗಲಾಚಿ ಬೇಡಿದ್ದಳು. ತನ್ನ ಮಗಳೊಂದಿಗೆ ಆತ್ಮಹತ್ಯೆಗೆ ಸಮುದ್ರ ಕಿನಾರೆಗೆ ತೆರಳುತ್ತಿರುವ ವೀಡಿಯೋ ಮಾಡಿ, ತನ್ನ ಅಕ್ಕ ಹಾಗೂ ಸಂಬಂಧಿಕರಿಗೆ ಕಳುಹಿಸಿದ್ದರು. ಹೀಗೆ ಕಳುಹಿಸಿದ ವೀಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು.

ವೈರಲ್ ಆದ ವೀಡಿಯೋ ಸುಳಿವಿನಿಂದ ಸ್ಥಳಕ್ಕೆ ಆಗಮಿಸಿದ್ದ ಪಣಂಬೂರು ಪೊಲೀಸರು, ಬೀಚ್‌ನಲ್ಲಿ ತಂದೆ ಮಗಳ ಹುಡುಕಾಟ ನಡೆಸಿದ್ದರು. ಎಲ್ಲಿಯೂ ರಾಜೇಶ್ ಸುಳಿವು ಸಿಗದಾಗ ಆತನ ಮೊಬೈಲ್ ಲೊಕೇಷನ್ ಪತ್ತೆ ಮಾಡಿದ ಪೊಲೀಸರು, ಕಾವೂರು ಶಾಂತಿ ನಗರಕ್ಕೆ ರಾಜೇಶ್ ಮನೆ ಹುಡುಕಿಕೊಂಡು ಹೋಗಿದ್ದರು. ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಯತ್ನಿಸುತ್ತಿದ್ದಾಗ ಸಿನಿಮೀಯ ರೀತಿಯಲ್ಲಿ ಮನೆ ಬಾಗಿಲು ಮುರಿದು ಒಳ ನುಗ್ಗಿ, ಆತನನ್ನು ರಕ್ಷಿಸಿದ್ದಾರೆ.

## EPFO ಸ್ಟಾಫ್ ಕೊ-ಅಪರೇಟೀವ್ ಸೊಸೈಟಿಯಲ್ಲಿ ಭಾರಿ ಗೋಲ್ಮಾಲ್

**ಬೆಂಗಳೂರು:** ಕಷ್ಟಪಟ್ಟು ಜೀವನವೆಲ್ಲಾ ದುಡಿದು ಕೂಡಿಟ್ಟ ಹಣ ಬ್ಯಾಂಕ್ ಗಳಲ್ಲಿ ಸೇಫಾ ಅನ್ನೊ ಪ್ರಶ್ನೆಗೆ ಉತ್ತರವಿಲ್ಲದಂತಾಗಿದೆ. 300 ಖಾತೆದಾರರ 70 ಕೋಟಿ ಹಣವನ್ನ ಕೊ-ಆಪರೇಟೀವ್ ಬ್ಯಾಂಕ್ ಸಿಬ್ಬಂದಿಗಳೇ ನುಂಗಿ ನೀರು ಕುಡಿದಿದ್ದಾರೆ.





ಪರೇಟಿವ್ ಸೊಸೈಟಿಯಲ್ಲಿ (EPFO Staff Cooperative Society) ನಡೆದ 70 ಕೋಟಿ ರೂ. ವಂಚನೆ ಪ್ರಕರಣ ಸಂಬಂಧ ಸಿಇಒ ಸೇರಿ ಇಬ್ಬರು ಪ್ರಮುಖ ಆರೋಪಿಗಳನ್ನ ಕಬ್ಬನ್ ಪಾರ್ಕ್ ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಸೊಸೈಟಿಯ ಸಿಇಒ ಗೋಪಿನಾಥ್ ಹಾಗೂ ಸಿಬ್ಬಂದಿ ಲಕ್ಷ್ಮಿ, ಜಗದೀಶ್ ಅರೆಸ್ಟ್ ಆಗಿದ್ದಾರೆ. ಇಪಿಎಫ್‌ಒ ಸಿಬ್ಬಂದಿ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿಯು ಕಳೆದ 61 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದೆ. ಇದು ಇಪಿಎಫ್‌ಒ ಸಿಬ್ಬಂದಿ ಪರಸ್ಪರ ನೆರವಿಗಾಗಿ ಸ್ಥಾಪಿಸಿಕೊಂಡಿರುವ ಸಂಸ್ಥೆಯಾಗಿದೆ. ಸ್ತುತ ಮತ್ತು ನಿವೃತ್ತ ಇಪಿಎಫ್‌ಒ ಸಿಬ್ಬಂದಿ ತಮ್ಮ ಉಳಿತಾಯವನ್ನ ಈ ಸೊಸೈಟಿಯಲ್ಲಿ ಎಫ್‌ಡಿ ಮಾಡಿದ್ದರು. ಈ ಠೇವಣಿಗಳಿಗೆ ಪ್ರತಿ ತಿಂಗಳು ಬಡ್ಡಿ ಹಣ ನೀಡಲಾಗುತ್ತಿತ್ತು. ಕಳೆದ ಮೂರು ತಿಂಗಳಿಂದ ಹೂಡಿಕೆದಾರರಿಗೆ ಬಡ್ಡಿ ಹಣ ಜಮೆಯಾಗದ ಕಾರಣ ಅನುಮಾನಗೊಂಡು, ಹೂಡಿಕೆದಾರರು ಸ್ವತಃ ಪರಿಶೀಲಿಸಿದಾಗ, ಸೊಸೈಟಿಯಲ್ಲಿ ಇರಿಸಿದ್ದ ಫಿಕ್ಸೆಡ್ ಡೆಪಾಸಿಟ್ ಹಣ ನಾಪತ್ತೆಯಾಗಿರುವುದು ಬೆಳಕಿಗೆ ಬಂದಿದೆ. ಕೇವಲ ಮೂರು ಕೋಟಿ ರೂಪಾಯಿಗಳನ್ನ ಮಾತ್ರ ಸಾಲವಾಗಿ ನೀಡಲಾಗಿದ್ದು, ಉಳಿದ 70 ಕೋಟಿ ರೂ. ಹಣ ದುರ್ಬಳಕೆಯಾಗಿದೆ ಎಂದು ಆರೋಪಿಸಲಾಗಿದೆ. ಸುಮಾರು 300ಕ್ಕೂ ಹೆಚ್ಚು ಠೇವಣಿದಾರರು ಈ ವಂಚನೆಗೆ ಒಳಗಾಗಿದ್ದಾರೆ ಎನ್ನಲಾಗಿದೆ.

### ಸಿಇಒ ಸೇರಿ ಇಬ್ಬರು ಅರೆಸ್ಟ್

ಪ್ರಕರಣದ ತನಿಖೆಯನ್ನು ತೀವ್ರಗೊಳಿಸಿರುವ ಪೊಲೀಸರು, ನ್ಯಾಯಾಲಯದಿಂದ ಸರ್ಚ್ ವಾರಂಟ್ ಪಡೆದು ಆರೋಪಿಗಳ ಮನೆಗಳ ಮೇಲೆ ಏಕಕಾಲಕ್ಕೆ ದಾಳಿ ನಡೆಸಿದ್ದಾರೆ. ಸಿಇಒ ಗೋಪಿ ಅವರ ಆರ್‌ಆರ್. ನಗರದ ನಿವಾಸದ ಮೇಲೆ ದಾಳಿ ನಡೆಸಿ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಇದಲ್ಲದೆ, ಎ1 ಗೋಪಿನಾಥ್, ಎ2 ಜಗದೀಶ್, ಎ7 ಲಕ್ಷ್ಮಿ, ಎ9 ಲಿಂಗೇಗೌಡ, ಮತ್ತು ಎ10 ರಾಮಾನುಜ ಅವರ ಆರ್‌ಆರ್. ನಗರ, ಜೆ.ಪಿ. ನಗರ, ಅಂಜನಾಪುರದಲ್ಲಿರುವ ಮನೆಗಳು, ಪಿಎಫ್ ಕಚೇರಿಯ ಬಳಿಯ ಸೊಸೈಟಿ ಕಚೇರಿ ಮತ್ತು ರಿಚ್ಮಂಡ್ ಸರ್ಕಲ್ ಬಳಿಯ ಕಚೇರಿಗಳ ಮೇಲೆ ದಾಳಿ ನಡೆಸಿ ಕೆಲ ದಾಖಲೆಗಳನ್ನ ಸೀಜ್ ಮಾಡಿದ್ದಾರೆ.

ಹಣ ಸೇಫ್ ಅಂತಾ ಬ್ಯಾಂಕಿನಲ್ಲಿಟ್ಟರೂ ದುಡಿದ ಹಣಕ್ಕೆ ಯಾವುದೇ ಗ್ಯಾರಂಟಿಯಿಲ್ಲದಂತಾಗಿದೆ. ಖಾತೆದಾರರ ಹಣಕ್ಕೆ ಕನ್ನ ಹಾಕಿದವರಿಂದ ಹಣ ಕಕ್ಕಿಸಿ ವಾಪಸ್ ಮರಳಿಸಬೇಕಿದೆ.

## ಬೆಂಗಳೂರಿನಲ್ಲಿ ರಸ್ತೆ ಗುಂಡಿ ಮುಚ್ಚಲು ಮತ್ತೆ ಡೆಡ್‌ಲೈನ್ ವಿಸ್ತರಣೆ



### ನವೆಂಬರ್ 10ರವರೆಗೆ ಅವಧಿ ವಿಸ್ತರಣೆ, ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಜನರ ಆಕ್ರೋಶ

**ಬೆಂಗಳೂರು:** ನಗರದ ರಸ್ತೆಗಳಲ್ಲಿ ಗುಂಡಿಗಳ ಆಳಕ್ಕೇ ಜನರ ಸಹನೆಯೂ ಮುಗಿದು ಹೋಗಿದೆ. ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಗುಂಡಿಗಳು, ಸರ್ಕಾರದ ಗ್ಯಾರಂಟಿ ಯೋಜನೆಗಳ ನಡುವೆ "ಗುಂಡಿ ಭಾಗ್ಯ" ಎಂಬ ಹೊಸ ತಲೆನೋವು ತಂದಿವೆ ಎಂದು ನಾಗರಿಕರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸರ್ಕಾರ ನಗರವನ್ನು ಗುಂಡಿಮುಕ್ತಗೊಳಿಸಲು ನೀಡಿದ್ದ ಡೆಡ್‌ಲೈನ್ ನಿನ್ನೆ ಮುಗಿದರೂ, ಹಲವೆಡೆ ಕೆಲಸ ಪೂರ್ಣಗೊಂಡಿಲ್ಲ. ಇದರಿಂದ ಅಧಿಕಾರಿಗಳ ನಿರ್ಲಕ್ಷ್ಯ ಮತ್ತೆ ಹೊರಬಿದ್ದಿದೆ. ಈಗ ಈ ಅವಧಿಯನ್ನು ನವೆಂಬರ್ 10ರವರೆಗೆ ವಿಸ್ತರಿಸಲಾಗಿದೆ. "ಸಿಎಂ ಮತ್ತು ಡಿಸಿಎಂ ನೀಡಿದ ಆದೇಶಗಳಿಗೂ ಕಿವಿಗೊಡದ ಅಧಿಕಾರಿಗಳು ಈಗ ಜಿಬಿಎ ಆಯುಕ್ತರ ಆದೇಶಕ್ಕೆ ಸ್ಪಂದಿಸುತ್ತಾರೆಯಾ?" ಎಂಬ ಪ್ರಶ್ನೆ ನಗರದಲ್ಲಿ ಕೇಳಿಬರುತ್ತಿದೆ.

ಪ್ರಸ್ತುತ ಬೆಂಗಳೂರು ನಗರದಲ್ಲಿ 16,000ಕ್ಕೂ ಹೆಚ್ಚು ಗುಂಡಿಗಳು ದಾಖಲಾಗಿವೆ. ಪ್ರಮುಖ ರಸ್ತೆಗಳಿಂದ ಹಿಡಿದು ಉಪರಸ್ತೆಗಳು, ವಾರ್ಡ್‌ಮಟ್ಟದ ಬೀದಿಗಳವರೆಗೂ ರಸ್ತೆಗಳಲ್ಲಿ ಟಾರ್ ಕಾಣದೆ ಹಾಳಾಗಿದೆ. ಮಳೆಗಾಲದ ಕಾರಣದಿಂದ ಗುಂಡಿ ಮುಚ್ಚುವ ಕೆಲಸ ವಿಳಂಬವಾಯಿತು ಎಂಬ ವಿವರಣೆ ನೀಡಿರುವುದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರ ವಾದ.

ಗುಂಡಿಗಳ ಸಮಸ್ಯೆ ತೀವ್ರವಾಗುತ್ತಿದ್ದಂತೆಯೇ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಸ್ಪಷ್ಟ ಆದೇಶ ನೀಡಿದ್ದರೂ ಫಲಿತಾಂಶ ತೃಪ್ತಿಕರವಾಗಿಲ್ಲ. ಇತ್ತೀಚೆಗಷ್ಟೇ ಮಹಾನಗರ ಪಾಲಿಕೆಯ ಅಧಿಕಾರಿಗಳನ್ನು ಸಭೆಗೆ ಕರೆಯಿಸಿಕೊಂಡು, ಆಯುಕ್ತರು ಒಂದು ವಾರದೊಳಗೆ ಎಲ್ಲಾ ಗುಂಡಿಗಳನ್ನು ಮುಚ್ಚುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಆದರೆ ಈ ಬಾರಿಯಾದರೂ ಅಧಿಕಾರಿಗಳು ಕಾರ್ಯರೂಪಕ್ಕೆ ತರುತ್ತಾರೆಯಾ, ಅಥವಾ ಮತ್ತೊಮ್ಮೆ ಕೇವಲ ಭರವಸೆಗಳಲ್ಲೇ ತೃಪ್ತಿ ಪಡೆಯಬೇಕಾಗುತ್ತದೆಯಾ ಎಂಬುದು ನಗರದ ಜನತೆಗೆ ಉಳಿದಿರುವ ಪ್ರಶ್ನೆ. ನಾಗರಿಕರು ಸರ್ಕಾರದಿಂದ ಶಾಶ್ವತ ಪರಿಹಾರ ಕ್ರಮ ಮತ್ತು ರಸ್ತೆ ಗುಣಮಟ್ಟದ ಮೇಲಿನ ನಿಗಾ ಬಲಪಡಿಸುವಂತೆ ಆಗ್ರಹಿಸಿದ್ದಾರೆ.

## ವೋಟ್‌ಚೋರಿ ಬಗ್ಗೆ ಮಾತಾಡೋ ರಾಹುಲ್ ಗಾಂಧಿಯದ್ದು ಚೈಲ್ಡಿಶ್ ಹೇಳಿಕೆ - ನಿಖಿಲ್ ಕುಮಾರಸ್ವಾಮಿ

**ಬೆಂಗಳೂರು:** ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯ ವೋಟ್‌ಚೋರಿ ಕುರಿತ ಹೇಳಿಕೆಗೆ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತೀವ್ರ ಪ್ರತಿಕ್ರಿಯೆ ನೀಡಿದ್ದಾರೆ. "ರಾಹುಲ್ ಗಾಂಧಿಯ ಮಾತುಗಳು ಚೈಲ್ಡಿಶ್, ರಾಜಕೀಯ ಗಂಭೀರತೆಯಿಲ್ಲದವು," ಎಂದು ಕಿಡಿಕಾರಿದ ಅವರು, ಕಾಂಗ್ರೆಸ್ ನಾಯಕತ್ವದ ದುರ್ಬಲತೆಯನ್ನೇ ಈ ಹೇಳಿಕೆ ತೋರಿಸುತ್ತದೆ ಎಂದು ಟೀಕಿಸಿದರು.



ರಾಹುಲ್ ಗಾಂಧಿ ಇತ್ತೀಚೆಗೆ ಕರ್ನಾಟಕದ ಆಳಂದ ಕ್ಷೇತ್ರದಲ್ಲಿ ವೋಟ್‌ಚೋರಿ ನಡೆದಿದೆ ಎಂದು ಆರೋಪಿಸಿದ್ದರು. ಈ ಕುರಿತು ಪ್ರತಿಕ್ರಿಯಿಸಿದ ನಿಖಿಲ್ ಕುಮಾರಸ್ವಾಮಿ, "ರಾಹುಲ್ ಗಾಂಧಿ ಒಂದು ಕ್ಷೇತ್ರದ ಹೆಸರು ಹಿಡಿದು 'ವೋಟ್ ಕದ್ದಿದ್ದಾರೆ' ಎಂದು ಹೇಳ್ತಿದ್ದಾರೆ. ಸೋತವರು ನಮ್ಮವರು, ಗೆದ್ದವರು ಬೇರೆ ಪಕ್ಷದವರು ಇದರಲ್ಲಿ ವೋಟ್‌ಚೋರಿ ಹೇಗೆ ಸಾಧ್ಯ?" ಎಂದು ಪ್ರಶ್ನಿಸಿದರು.

ಅವರು ಮುಂದುವರಿದು, "ಇದು ಜನರ ತೀರ್ಪನ್ನು ಒಪ್ಪಿಕೊಳ್ಳದ ರಾಜಕೀಯ. ಜನರು ತೀರ್ಮಾನ ಮಾಡಿದ ತೀರ್ಪನ್ನು 'ವೋಟ್‌ಚೋರಿ' ಅಂತ ಕರೆಯುವುದು ಜನರ ನಿರ್ಧಾರವನ್ನು ಅವಮಾನಿಸುವಂತದ್ದು. ರಾಹುಲ್ ಗಾಂಧಿಯಂತಹ ಹಿರಿಯ ನಾಯಕರಿಂದ ಇಂತಹ ಹೇಳಿಕೆಗಳು ಬರೋದು ಬೇಸರಕರ," ಎಂದು ಹೇಳಿದರು.

ಬಿಹಾರ ಚುನಾವಣೆಯತ್ತ ಗಮನಸೆಳೆದ ನಿಖಿಲ್ ಕುಮಾರಸ್ವಾಮಿ, "ಬಿಹಾರದಲ್ಲಿ ರಾಹುಲ್ ಗಾಂಧಿ ಆರ್‌ಜೆಡಿ ಜೊತೆ ಮೈತ್ರಿ ಮಾಡಿಕೊಂಡಿದ್ದಾರೆ. ಆದರೆ ಆ ಮೈತ್ರಿಗೆ ನಷ್ಟ ತರುವವರು ರಾಹುಲ್ ಗಾಂಧಿಯೇ. ಅವರ ಬಾಲಿಶ ಹೇಳಿಕೆಗಳು, ಅಸಂಬದ್ಧ ಆರೋಪಗಳು ಆರ್‌ಜೆಡಿಗೆ ತೀರಣೆಯಾದೀತು. ಬಿಹಾರದಲ್ಲಿ ಆರ್‌ಜೆಡಿಯನ್ನು ಸೋಲಿಸಲು ಬೇರೆ ಯಾರೂ ಬೇಡ — ರಾಹುಲ್ ಗಾಂಧಿಯೇ ಸಾಕು," ಎಂದು ವ್ಯಂಗ್ಯವಾಡಿದರು.



ನಿಖಿಲ್ ಕುಮಾರಸ್ವಾಮಿಯ ಈ ಹೇಳಿಕೆ ಇದೀಗ ರಾಜಕೀಯ ವಲಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದ್ದು, ಜೆಡಿಎಸ್ ಮತ್ತು ಕಾಂಗ್ರೆಸ್ ನಡುವಿನ ಶಬ್ದಯುದ್ಧ ಮತ್ತಷ್ಟು ತೀವ್ರಗೊಳ್ಳುವ ಸೂಚನೆ ನೀಡಿದೆ.

## ಸ್ವೀಟ್ ಬಾಕ್ಸ್ ಮಾದರಿಯಲ್ಲಿ ಬಸ್ಸಿನಲ್ಲಿ ಹಣ, ಚಿನ್ನ ಸಾಗಾಟ: 32 ಚಿನ್ನದ ಬಳೆ, 50 ಲಕ್ಷ ರೂ ಜಪ್ತಿ

**ಕಾರವಾರ:** ಮುಂಬೈನಿಂದ ಮಂಗಳೂರಿಗೆ) ತೆರಳುತ್ತಿದ್ದ ಬಸ್‌ನಲ್ಲಿ (bus) ಸಾಗಿಸುತ್ತಿದ್ದ 401 ಗ್ರಾಂ ತೂಕದ 32 ಚಿನ್ನದ ಬಳೆ ಹಾಗೂ 50 ಲಕ್ಷ ರೂ ನಗದು ಹಣವನ್ನು ಉತ್ತರ ಕನ್ನಡ ಜಿಲ್ಲೆಯ ಭಟ್ಕಳದಲ್ಲಿ ಪೊಲೀಸರು ಜಪ್ತಿ ಮಾಡಿದ್ದಾರೆ. ಭಟ್ಕಳದಲ್ಲಿ ತಪಾಸಣೆ ಮಾಡಿದಾಗ ಸೂಟ್‌ಕೇಸ್‌ನಲ್ಲಿ ಚಿನ್ನ ಮತ್ತು ನಗದು ಪತ್ತೆ ಆಗಿದೆ. ಸದ್ಯ ಭಟ್ಕಳ ಶಹರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

### ಸೂಟ್‌ಕೇಸ್ ನೀಡಿದ್ದ ಅನಾಮಿಕ ವ್ಯಕ್ತಿ

ಮುಂಬೈನಲ್ಲಿ ಬಸ್ ಚಾಲಕನ ಕೈಗೆ ಅನಾಮಿಕ ವ್ಯಕ್ತಿ ಸೂಟ್‌ಕೇಸ್ ನೀಡಿದ್ದಾನೆ. ಮಂಗಳೂರು ಬಸ್ ನಿಲ್ದಾಣದಲ್ಲಿ ಸೂಟ್‌ಕೇಸ್ ತೆಗೆದುಕೊಳ್ಳುತ್ತಾರೆ ಎಂದು ಹೇಳಿದ್ದ. ಬಸ್ ಸಂಖ್ಯೆ ಹೇಳುತ್ತೇನೆ, ನಮ್ಮವರು ಬಂದು ಪಡೆಯುತ್ತಾರೆ. ಇರ್ಫಾನ್ ಎಂಬುವವರಿಗೆ ಸೂಟ್‌ಕೇಸ್ ಕೊಡುವಂತೆ ಹೇಳಿದ್ದ.

ಸಂಶಯಾಸ್ಪದ ಹಿನ್ನೆಲೆ ಭಟ್ಕಳದಲ್ಲಿ ಬಸ್ ಸರ್ಚ್ ಮಾಡಿದಾಗ ಪೊಲೀಸರ ಕಣ್ಣಿಗೆ ಸೂಟ್‌ಕೇಸ್‌ನಲ್ಲಿ ಸ್ವೀಟ್ ಬಾಕ್ಸ್ ಮಾದರಿಯಲ್ಲಿ ಕಂಡಿದ್ದು, ಅದನ್ನು ಓಪನ್ ಮಾಡಿದಾಗ ಹಣ, ಒಡವೆ ಪತ್ತೆ ಆಗಿವೆ. ಸದ್ಯ ಬಸ್ ಚಾಲಕನಿಂದ ನಗದು ಮತ್ತು ಚಿನ್ನ ವಶಕ್ಕ ಪಡೆದಿರುವ ಪೊಲೀಸರು, ಮಾಲೀಕರ ಪತ್ತೆಗಾಗಿ ತನಿಖೆ ಮುಂದುವರೆಸಿದ್ದಾರೆ.

## ಆಂಧ್ರದ ಕಾಲೇಜಿನಲ್ಲಿ 4 ದಿನಗಳಲ್ಲಿ ಇಬ್ಬರು ವಿದ್ಯಾರ್ಥಿಗಳಿಂದ ಆತ್ಮಹತ್ಯೆಗೆ ಯತ್ನ

**ಚಿತ್ತೂರು:** ಕಳೆದ 4 ದಿನಗಳಲ್ಲಿ ಒಂದೇ ಕಾಲೇಜಿನ ಇಬ್ಬರು ವಿದ್ಯಾರ್ಥಿಗಳು ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ಆಂಧ್ರಪ್ರದೇಶದ ಚಿತ್ತೂರು ಜಿಲ್ಲೆಯ ಕಾಲೇಜಿನಲ್ಲಿ ನಡೆದಿದೆ. ಶ್ರೀನಿವಾಸ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್ಮೆಂಟ್ ಸ್ಟಡೀಸ್ (SITAMS) ನಲ್ಲಿ ಓದುತ್ತಿರುವ ರುದ್ರ ಮೂರ್ತಿ ಎಂಬ ವಿದ್ಯಾರ್ಥಿಯು ಕಾಲೇಜು ಕಟ್ಟಡದ ಮೂರನೇ ಮಹಡಿಯಿಂದ ಹಾರಿದ್ದಾನೆ.

ಅದೇ ಕಾಲೇಜಿನ ಮತ್ತೊಬ್ಬ ಎಂಜಿನಿಯರಿಂಗ್ ವಿದ್ಯಾರ್ಥಿನಿ ನಂದಿನಿ ರೆಡ್ಡಿ ಮೂರನೇ ಮಹಡಿಯಿಂದ ಹಾರಿದ ನಾಲ್ಕು ದಿನಗಳ ನಂತರ ಈ ಘಟನೆ ನಡೆದಿದೆ. ಪ್ರಸ್ತುತ ಅವರು ಚಿಕಿತ್ಸೆ ಪಡೆಯುತ್ತಿದ್ದು, ಸ್ಥಿತಿ ಗಂಭೀರವಾಗಿದೆ.

ಸೋಮವಾರ ಮಧ್ಯಾಹ್ನ ಸುಮಾರು 2.10 ರ ಸುಮಾರಿಗೆ ರುದ್ರ ಕಾಲೇಜು ಕಟ್ಟಡದ ಗೋಡೆ ಹತ್ತುವುದನ್ನು ಸಿಸಿಟಿವಿ ದೃಶ್ಯಾವಳಿಗಳು ತೋರಿಸುತ್ತವೆ. ಆತ ಸಮತೋಲನ ಕಾಯ್ದುಕೊಂಡು, ಬಲಕ್ಕೆ ನಡೆದು ನಂತರ ಕಾರಿಡಾರ್‌ನತ್ತ ಇಣುಕುತ್ತಾನೆ. ಅವನು ಯಾರೊಂದಿಗಾದರೂ ಮಾತನಾಡಲು ಪ್ರಯತ್ನಿಸುತ್ತಿದ್ದಾನೋ ಅಥವಾ ಯಾರಾದರೂ ನೋಡುತ್ತಿದ್ದಾರಾ ಎಂದು ಪರಿಶೀಲಿಸಲು ಪ್ರಯತ್ನಿಸುತ್ತಿದ್ದಾನೋ ಎಂಬುದು ಸ್ಪಷ್ಟವಾಗಿಲ್ಲ.

ಮೂರನೇ ಮಹಡಿಯಿಂದ ಜಿಗಿಯುವ ಮೊದಲು ಅವನು ಕೆಲವು ಸೆಕೆಂಡುಗಳ ಕಾಲ ಅಲ್ಲೇ ನಿಂತಿದ್ದ. ಆತನನ್ನು ತಮಿಳುನಾಡಿನ ವೆಲ್ಲೂರಿನ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಅಲ್ಲಿ ಆತ ಚಿಕಿತ್ಸೆಯ ಸಮಯದಲ್ಲಿ ಸಾವನ್ನಪ್ಪಿದ್ದ. ಪೊಲೀಸ್ ಅಧಿಕಾರಿ ಸಾಯಿನಾಥ್ ಅವರ ಪ್ರಕಾರ, ಒಬ್ಬ ಹುಡುಗಿ ತನ್ನ ಪ್ರೀತಿಯ ಪ್ರಸ್ತಾಪವನ್ನು ತಿರಸ್ಕರಿಸಿದ ನಂತರ ರುದ್ರ ನಿರಾಶೆಗೊಂಡಿದ್ದ.

ರುದ್ರ ಮೂರ್ತಿ ಮತ್ತೊಬ್ಬ ಎರಡನೇ ವರ್ಷದ ವಿದ್ಯಾರ್ಥಿನಿಗೆ ಪ್ರಪೋಸ್ ಮಾಡಿದ್ದ, ಅವಳು, ನಾವು ಮೊದು ಪದವಿ ಪಡೆದು ಉದ್ಯೋಗ ಪಡೆಯೋಣ. ಈಗ ಈ ಪ್ರೀತಿಯನ್ನು ನನಗೆ ಒಪ್ಪಿಕೊಳ್ಳುವ ಶಕ್ತಿ ಇಲ್ಲ, ಇನ್ನು ಪೋಷಕರನ್ನು ಒಪ್ಪಿಸಲು ಕೂಡ ಸಾಧ್ಯವಿಲ್ಲ ಎಂದಿದ್ದಳು.

ಮೂರನೇ ವರ್ಷದ ಬಿ.ಟೆಕ್ ಇಸಿಇ ಅಥವಾ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಎಂಜಿನಿಯರಿಂಗ್‌ನಲ್ಲಿ ಬ್ಯಾಚುಲರ್ ಆಫ್ ಟೆಕ್ನಾಲಜಿ ವಿದ್ಯಾರ್ಥಿನಿ ನಂದಿನಿ ರೆಡ್ಡಿ, ಪರೀಕ್ಷೆಗೆ ಹಾಜರಾಗಲು ಅನುಮತಿ ನಿರಾಕರಿಸಿರುವ ಕಾರಣ ಮೂರನೇ ಮಹಡಿಯಿಂದ ಹಾರಿದ್ದಾರೆ ಎಂದು ವರದಿಯಾಗಿದೆ.

ರೆಡ್ಡಿಗೆ ಗಂಭೀರ ಗಾಯಗಳಾಗಿದ್ದು, ತಕ್ಷಣ ಅವರನ್ನು ಚಿತ್ತೂರು ಸರ್ಕಾರಿ ಆಸ್ಪತ್ರೆಗೆ ಕರೆದೊಯ್ಯಲಾಯಿತು ಮತ್ತು ನಂತರ ಬೆಂಗಳೂರಿನ ವೈದೇಹಿ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಅಲ್ಲಿ ಅವರು ಪ್ರಸ್ತುತ ಚಿಕಿತ್ಸೆ ಪಡೆಯುತ್ತಿದ್ದಾರೆ.

## ನಿವೃತ್ತ ಅಧಿಕಾರಿಯ ಮಗಳ ಹೆಣ ಕೊಡಲು ಲಂಚಕ್ಕೆ ಬೇಡಿಕೆಯಿಟ್ಟಿದ್ದ ಇನ್ಸ್‌ಪೆಕ್ಟರ್ ಅಮಾನತು



**ಬೆಂಗಳೂರು:** ಮಗಳ ಶವ ಹಸ್ತಾಂತರಕ್ಕೆ ಲಂಚಕ್ಕೆ ಬೇಡಿಕೆ ಇಟ್ಟಿದ್ದ ಬೆಳ್ಳಂದೂರು ಇನ್ಸ್‌ಪೆಕ್ಟರ್ ರಮೇಶ್ ರೊಟ್ಟಿಯನ್ನು ಅಮಾನತು ಮಾಡಿ, ಕಮಿಷನರ್ ಆದೇಶ ಹೊರಡಿಸಿದ್ದಾರೆ.

ಬಿಪಿಸಿಎಲ್ ನಿವೃತ್ತ ಅಧಿಕಾರಿ ಶಿವಕುಮಾರ್ ಅವರು, ನನ್ನ ಮಗಳ ಹೆಣ ಕೊಡಲು ಪೊಲೀಸರು ಕೊಟ್ಟ ನೋವು ಅಷ್ಟಿಷ್ಟಲ್ಲ. ಮಗಳ ಸತ್ತ ನೋವು ನಮ್ಮಲ್ಲಿದ್ದಾಗಲೇ ಪೊಲೀಸರು ಲಂಚದ ಹಣಕ್ಕಾಗಿ ಕೈಯೊಡ್ಡಿದ್ದರು. ಪೋಸ್ಟ್ ಮಾರ್ಟಂ, ಆಂಬುಲೆನ್ಸ್, ಯುಡಿಆರ್ ಸರ್ಟಿಫಿಕೇಟ್ ಹೀಗೆ ಎಲ್ಲಾ ಕಡೆ ಹಣ ಕೀಳುವ ಕೆಲಸ ಮಾಡಿದ್ದರು. ಇನ್ಸ್‌ಪೆಕ್ಟರ್ ಸೌಜನ್ಯದಿಂದ ನನ್ನ ಜೊತೆ ವರ್ತಿಸಿಲ್ಲ ಎಂದು ಆರೋಪಿಸಿದ್ದರು. ಆರೋಪ ಕೇಳಿಬಂದಾಗ ಘಟನೆ ಬಗ್ಗೆ ವರದಿ ನೀಡುವಂತೆ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ವೈಟ್‌ಫೀಲ್ಡ್ ಡಿಸಿಪಿ ಪರಶುರಾಮ್‌ಗೆ ಸೂಚನೆ ನೀಡಿದ್ದರು. ಈ ಬಗ್ಗೆ ತನಿಖೆ ನಡೆಸಿದ ವೈಟ್‌ಫೀಲ್ಡ್ ಸೆನ್ ಎಸಿಪಿ ಬಾಲಕೃಷ್ಣ ಮೂರು ದಿನಗಳ ಹಿಂದೆಯೇ ವರದಿ ನೀಡಿದ್ದರು. ವರದಿ ಆಧಾರದ ಮೇಲೆ ಕರ್ತವ್ಯ ಲೋಪ ಹಿನ್ನೆಲೆ ಬೆಳ್ಳಂದೂರು ಠಾಣೆಯ ಇನ್ಸ್‌ಪೆಕ್ಟರ್ ರಮೇಶ್ ರೊಟ್ಟಿಯನ್ನು ಅಮಾನತು ಮಾಡಿ ಕಮಿಷನರ್ ಸೀಮಂತ್ ಕುಮಾರ್ ಸಿಂಗ್ ಆದೇಶಿಸಿದ್ದಾರೆ.



ಬಿಪಿಸಿಎಲ್ ನಿವೃತ್ತ ಅಧಿಕಾರಿ ಶಿವಕುಮಾರ್‌ರಿಂದ ಪೊಲೀಸರು, ಬಿಬಿಎಂಪಿ ಅಧಿಕಾರಿಗಳು ಹಾಗೂ ಸ್ಮಶಾನ ಸಿಬ್ಬಂದಿ ಹಣ ಪಡೆದಿದ್ದನ್ನು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಗಂಭೀರವಾಗಿ ಪರಿಗಣಿಸಿದೆ. ಘಟನೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿರೋ, ಎನ್‌ಹೆಚ್‌ಆರ್‌ಸಿ ಎರಡು ವಾರಗಳಲ್ಲಿ ವಿಸ್ತೃತ ವರದಿ ನೀಡುವಂತೆ ಕರ್ನಾಟಕದ ಮುಖ್ಯ ಕಾರ್ಯದರ್ಶಿ ಮತ್ತು ಪೊಲೀಸ್ ಮಹಾನಿರ್ದೇಶಕರಿಗೆ ನೋಟಿಸ್ ನೀಡಿದೆ.

## ನಾಡಕಚೇರಿಯಲ್ಲೇ ವಿಷ ಸೇವಿಸಿ ಆತ್ಮಹತ್ಯೆಗೆ ರೈತನ ಯತ್ನ

**ಗದಗ:** ಬೆಳೆಹಾನಿ ಪರಿಹಾರ ಬಾರದಕ್ಕೆ ಮನನೊಂದು ರೈತ ನಾಡಕಚೇರಿಯಲ್ಲಿ ಅಧಿಕಾರಿಗಳ ಎದುರಲ್ಲೇ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ಗದಗ ಜಿಲ್ಲೆಯ ನರಗುಂದ ತಾಲೂಕಿನ ಕೊಣ್ಣೂರ ಗ್ರಾಮದಲ್ಲಿ ನಡೆದಿದೆ. ನರಗುಂದ ತಾಲೂಕಿನ ಬೆಳ್ಳೇರಿ ಗ್ರಾಮದ ರೈತ ಸಿದ್ದನಗೌಡ ಹಿರೇಗೌಡ್ರು ಆತ್ಮಹತ್ಯೆಗೆ ಯತ್ನಿಸಿದ್ದು, ಸಂಕಟ ತಾಳಲಾರದೆ ನಾಡ ಕಚೇರಿಯಲ್ಲೇ ನರಳಾಡಿದ್ದಾರೆ.

ನಾಲ್ಕು ಎಕರೆ ಜಮೀನಿನಲ್ಲಿ ಗೋವಿನ ಜೋಳ, ಈರುಳ್ಳಿ ಬೆಳೆಯನ್ನ ಸಿದ್ದನಗೌಡ ಹಿರೇಗೌಡ್ರು ಬೆಳೆದಿದ್ದರು. ಆದರೆ, ಮಳೆ ಮತ್ತು ಮಲಪ್ರಭಾ ನದಿ ಪ್ರವಾಹದಿಂದ ಬೆಳೆಗೆ ಹಾನಿಯಾಗಿದೆ. ಹೀಗಿದ್ದರೂ ಈ ಬಗ್ಗೆ ಬೆಳೆ ಹಾನಿ ಎಂಟ್ರಿಯಾಗಿಲ್ಲ. ವಿಷಯವನ್ನು ತಹಶೀಲ್ದಾರ್ ಮತ್ತು ಜಿಲ್ಲಾಧಿಕಾರಿಗಳ ಗಮನಕ್ಕೆ ತರದೆ ಗ್ರಾಮ ಲೆಕ್ಕಾಧಿಕಾರಿ ನಿರ್ಲಕ್ಷ್ಯ ತೋರಿದ್ದಾರೆ ಎಂಬುದು ಆರೋಪ ರೈತನದ್ದು. ಹೀಗಾಗಿ ಮನನೊಂದಿದ್ದ ಸಿದ್ದನಗೌಡ ಹಿರೇಗೌಡ್ರು ನಾಡಕಚೇರಿ ಮುಂದೆಯೇ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ.

ವಿಷ ಸೇವಿಸಿದ್ದ ಸಿದ್ದನಗೌಡ ಹಿರೇಗೌಡ್ರನ್ನು ಸ್ಥಳದಲ್ಲಿದ್ದ ರೈತರು ತಕ್ಷಣ ನರಗುಂದ ಆಸ್ಪತ್ರೆಗೆ ಆ್ಯಂಬುಲೆನ್ಸ್ ಮೂಲಕ ಕೊಂಡೊಯ್ದು ದಾಖಲಿಸಿದ್ದಾರೆ. ಆದರೆ ಪರಿಸ್ಥಿತಿ ಗಂಭೀರವಾಗಿರುವ ಕಾರಣ ಹೆಚ್ಚಿನ ಚಿಕಿತ್ಸೆಗಾಗಿ ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಗೆ ರವಾನಿಸಲಾಗಿದೆ. ನರಗುಂದ ಡಿವೈಎಸ್ಪಿ ಪ್ರಭು ಸೇರಿ ಅಧಿಕಾರಿಗಳು ಘಟನೆ ಬಗ್ಗೆ ಮಾಹಿತಿ ಪಡೆದಿದ್ದು, ಸಿದ್ದನಗೌಡ ಹಿರೇಗೌಡರಿಗೆ ಏನಾದರೂ ಹೆಚ್ಚುಕಮ್ಮಿ ಆದರೆ ಅಧಿಕಾರಿಗಳೇ ಹೊಣೆ ಎಂದು ಈ ವೇಳೆ ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಮಾತು ಬಾರದ ವಿದ್ಯಾರ್ಥಿನಿಗೆ ಶಿಕ್ಷಕರಿಂದ ಲೈಂಗಿಕ ಕಿರುಕುಳ ಆರೋಪ

**ಚಾಮರಾಜನಗರ:** ಜಿಲ್ಲೆಯ ಕೊಳ್ಳೇಗಾಲ ಪಟ್ಟಣದಲ್ಲಿ ನೆಲೆಸಿರುವ ಖಾಸಗಿ ವಾಕ್ ಮತ್ತು ಶ್ರವಣ ಶಾಲೆಯೊಂದರಲ್ಲಿ ನಡೆದಿರುವ ನಾಚಿಕೆಗೇಡಿತನದ ಘಟನೆ ಇದೀಗ ಬಹಿರಂಗವಾಗಿ ಹೊರಬಿದ್ದಿದೆ. ಸುಮಾರು 13 ವರ್ಷಗಳ ಹಿಂದೆಯೇ ನಡೆದಿದ್ದರೂ, ಈ ವಿಷಯ ಇದೀಗ ಬೆಳಕಿಗೆ ಬಂದಿದ್ದು ಜಿಲ್ಲೆಯಾದ್ಯಂತ ಆಘಾತ ಮತ್ತು ಆಕ್ರೋಶ ಉಂಟುಮಾಡಿದೆ.

ಮಾಹಿತಿ ಪ್ರಕಾರ, 2012-13ನೇ ಸಾಲಿನಲ್ಲಿ ಕೊಳ್ಳೇಗಾಲದ ಖಾಸಗಿ ವಾಕ್ ಮತ್ತು ಶ್ರವಣ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿದ್ದ ವಿಶೇಷ ಚೇತನ ವಿದ್ಯಾರ್ಥಿನಿ ಮೇಲೆ ಅಲ್ಲಿನ ಶಿಕ್ಷಕರೊಬ್ಬರು ನಿರಂತರವಾಗಿ ಲೈಂಗಿಕ ಕಿರುಕುಳ ನೀಡುತ್ತಿದ್ದರು ಎನ್ನಲಾಗಿದೆ. ವಿದ್ಯಾರ್ಥಿನಿಗೆ ಮಾತನಾಡುವ ಸಾಮರ್ಥ್ಯ ಇರದಿದ್ದುದರಿಂದ ಅದನ್ನು ದುರುಪಯೋಗಪಡಿಸಿಕೊಂಡ ಶಿಕ್ಷಕ, ನಿರಂತರವಾಗಿ ಕಿರುಕುಳ ನೀಡಿದ್ದಾನೆ ಎಂಬುದು ಆರೋಪ. ಈ ಬಗ್ಗೆ ವಿದ್ಯಾರ್ಥಿನಿ ಆಗ ಆಪ್ತರಿಗೆ ಹೇಳಲು ಸಾಧ್ಯವಾಗದೆ ಮೌನ ವಹಿಸಿದ್ದಾಳೆ.

ಆದರೆ ಇತ್ತೀಚೆಗೆ ಶಾಲೆಯಲ್ಲಿ ಹಳೆಯ ವಿದ್ಯಾರ್ಥಿಗಳ (Alumni Meet) ಸಭೆ ನಡೆದ ಸಂದರ್ಭದಲ್ಲಿ, ಸಂತ್ರಸ್ತೆ ಮನಸ್ಸು ತಡೆಯಲಾಗದೆ ತನ್ನ ಬಾಲ್ಯದಲ್ಲಿ ನಡೆದ ಈ ಪೀಡನೆಯ ಕುರಿತ ವಿವರವನ್ನು ಎಲ್ಲರ ಮುಂದೆಯೂ ಬಿಚ್ಚಿಟ್ಟಿದ್ದಾಳೆ. ಈ ಮೂಲಕ ವರ್ಷಗಳ ಕಾಲ ಮುಚ್ಚಿಟ್ಟಿದ್ದ ಕೃತ್ಯ ಇದೀಗ ಬೆಳಕಿಗೆ ಬಂದಿದೆ. ಸಂತ್ರಸ್ತೆಯ ಹೇಳಿಕೆಯ ಆಧಾರದ ಮೇಲೆ, ಶಾಲೆಯ ಸಿಇಒ ಕೊಳ್ಳೇಗಾಲ ಪಟ್ಟಣ ಪೊಲೀಸ್ ಠಾಣೆಗೆ ಅಧಿಕೃತ ದೂರು ಸಲ್ಲಿಸಿದ್ದು, ಪೊಲೀಸರು ಶಿಕ್ಷಕನ ವಿರುದ್ಧ ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆಯ ಕಾಯ್ದೆ (POCSO Act) ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಪೊಲೀಸರು ಪ್ರಾಥಮಿಕ ತನಿಖೆ ಆರಂಭಿಸಿದ್ದು, ಪ್ರಕರಣ ದಾಖಲಾದ ದಿನಾಂಕ ಅಕ್ಟೋಬರ್ 30 ಎಂದು ತಿಳಿದುಬಂದಿದೆ. ಪೊಲೀಸರು ಆರೋಪಿಯನ್ನು ಬಂಧಿಸುವ ಕಾರ್ಯಾಚರಣೆ ಮುಂದುವರೆಸಿದ್ದು, ತನಿಖೆ ಪ್ರಗತಿಯಲ್ಲಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (SP) ತಿಳಿಸಿದ್ದಾರೆ.

ಈ ಘಟನೆಯು ಶಿಕ್ಷಕ-ವಿದ್ಯಾರ್ಥಿ ನಂಬಿಕೆಯ ಬಂಧವನ್ನು ಮುರಿದಂತಾಗಿದೆ ಎಂದು ಸ್ಥಳೀಯರು ತೀವ್ರ ಖಂಡನೆ ವ್ಯಕ್ತಪಡಿಸಿದ್ದಾರೆ. ವಿಶೇಷ ಚೇತನ ಮಕ್ಕಳ ಮೇಲಿನ ಇಂತಹ ಕೃತ್ಯಗಳು ಮಾನವೀಯ ಮೌಲ್ಯಗಳೇ ಕುಸಿಯುತ್ತಿರುವುದಕ್ಕೆ ಉದಾಹರಣೆ ಎಂದು ಸಾಮಾಜಿಕ ಸಂಘಟನೆಗಳು ಮತ್ತು ಪೋಷಕರು ಕಳವಳ ವ್ಯಕ್ತಪಡಿಸಿದ್ದಾರೆ.

## ಡಿಸಿ ಕಚೇರಿ ಮುಂದೆ ಆತ್ಮಹತ್ಯೆಗೆ ಯತ್ನಿಸಿದ್ದ ರೈತ ಚಿಕಿತ್ಸೆ ಫಲಿಸದೆ ಸಾವು



**ಮಂಡ್ಯ:** ಸರ್ಕಾರದಿಂದ ಪರಿಹಾರಕ್ಕಾಗಿ ಹಲವು ವರ್ಷಗಳಿಂದ ಕಚೇರಿ ತಿರುಗಾಡಿದ್ದ ರೈತ ನಿರಾಶೆಯಲ್ಲಿ ಡಿಸಿ ಕಚೇರಿ ಎದುರೇ ಆತ್ಮಹತ್ಯೆಗೆ ಯತ್ನಿಸಿ ನಂತರ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುವ (Mandya Farmer Death) ಘಟನೆ ಮಂಡ್ಯ ಜಿಲ್ಲೆಯಲ್ಲಿ ನಡೆದಿದೆ. ಕೆ.ಆರ್. ಪೇಟೆ ತಾಲೂಕಿನ ಮೂಡನಹಳ್ಳಿ ಗ್ರಾಮದ ಮಂಜೇಗೌಡ ಮಂಗಳವಾರ ಡಿಸಿ ಕಚೇರಿ ಮುಂದೆ ಆತ್ಮಹತ್ಯೆಗೆ ಯತ್ನಿಸಿದ್ದರು.

ಡಿಸಿ ಕಚೇರಿ ಎದುರು ಆತ್ಮಹತ್ಯೆಗೆ ಯತ್ನಿಸಿ ಆಸ್ಪತ್ರೆಗೆ ದಾಖಲಾಗಿದ್ದ ರೈತ 1970ರ ದಶಕದಲ್ಲಿ ಮಂಜೇಗೌಡ ಅವರ ತಾತನಿಗೆ ಸೇರಿದ ಸುಮಾರು 2.5 ಎಕರೆ ಜಮೀನನ್ನು ಸರ್ಕಾರ ವಶಪಡಿಸಿಕೊಂಡು ಆಶ್ರಯ ಯೋಜನೆ ಅಡಿಯಲ್ಲಿ ಸೈಟ್‌ಗಳ ರೂಪದಲ್ಲಿ ಹಂಚಿಕೆ ಮಾಡಿತ್ತು. ಈ ಹಿನ್ನೆಲೆ ಸೋಮವಾರವಿಡೀ ಡಿಸಿ ಕಚೇರಿಯಲ್ಲಿ ಕಾದಿದ್ದರೂ ಸ್ಪಂದನೆ ಸಿಗದೆ ಬೇಸತ್ತ ರೈತ ಮಂಜೇಗೌಡ, ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಎದುರಿನ ಪಾರ್ಕ್‌ನಲ್ಲಿ ತನ್ನ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿಕೊಂಡಿದ್ದರು. ಸ್ಥಳೀಯರು ತಕ್ಷಣ ಬೆಂಕಿ ನಂದಿಸಿ ಅಂಬುಲೆನ್ಸ್ ಮೂಲಕ ಮಿಮ್ಸ್ ಆಸ್ಪತ್ರೆಗೆ ರವಾನಿಸಿದ್ದರು. ದೇಹದ 60 ಪ್ರತಿಶತಕ್ಕಿಂತ ಹೆಚ್ಚು ಭಾಗ ಸುಟ್ಟಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಮಂಜೇಗೌಡ ಇಂದು ಬೆಳಿಗ್ಗೆ ಮೃತಪಟ್ಟಿದ್ದಾರೆ.

**ಲಂಚಕ್ಕಾಗಿ ಅಧಿಕಾರಿಗಳಿಂದ ಒತ್ತಡ ಆರೋಪ**

ಪರಿಹಾರದ ಬದಲಾಗಿ ಗೋಮಾಳ ಜಾಗ ನೀಡಬೇಕೆಂದು ಮಂಜೇಗೌಡ ಹಲವಾರು ವರ್ಷಗಳಿಂದ ಅಧಿಕಾರಿಗಳಿಗೆ ಮನವಿ ಸಲ್ಲಿಸುತ್ತಾ ಬಂದಿದ್ದರು. ಮಲ್ಲೇಹಳ್ಳಿ ಬಳಿ ಇರುವ 2.5 ಎಕರೆ ಗೋಮಾಳ ಜಾಗವನ್ನು ಕಳೆದ 20 ವರ್ಷಗಳಿಂದ ಅಧಿಕೃತವಾಗಿ ಮಂಜೂರು ಮಾಡುವಂತೆ ತಹಶಿಲ್ದಾರ್ ಹಾಗೂ ಜಿಲ್ಲಾಧಿಕಾರಿ ಕಚೇರಿಗಳಿಗೆ ಹಲವು ಬಾರಿ ಅರ್ಜಿ ಸಲ್ಲಿಸಿದ್ದರೂ ಯಾವುದೇ ಸ್ಪಂದನೆ ದೊರೆತಿರಲಿಲ್ಲ. ಕುಟುಂಬದವರ ಹೇಳಿಕೆಯಂತೆ ಅಧಿಕಾರಿಗಳು ದಾಖಲೆ ಪರಿಶೀಲನೆ ಹಾಗೂ ಪ್ರಕ್ರಿಯೆ ಹೆಸರಿನಲ್ಲಿ ಓಡಾಡಿಸುವುದರ ಜೊತೆಗೆ ಲಂಚಕ್ಕಾಗಿ ಒತ್ತಡ ಹೇರಿದ್ದರು. ಬ್ಯಾಂಕ್ ಸೇರಿದಂತೆ ಹಲವೆಡೆ 7-8 ಲಕ್ಷ ರೂಪಾಯಿ ಸಾಲ ಮಾಡಿದ್ದ ಮಂಜೇಗೌಡ, ಪರಿಹಾರವೂ ಸಿಗದೇ ಭೂಮಿಯೂ ಮಂಜೂರಾಗದೆ ಹತಾಶರಾಗಿದ್ದರು.

ಮೃತರ ಪುತ್ರ ಪುನೀತ್ ಮಾತನಾಡಿ, ನಮ್ಮ ಕುಟುಂಬಕ್ಕೆ ಸೇರಿದ ಜಮೀನನ್ನು ಸರ್ಕಾರ ತೆಗೆದುಕೊಂಡು ಪರಿಹಾರ ಕೊಡಲಿಲ್ಲ. ಬದಲಿಗೆ ಗೋಮಾಳ ಜಾಗ ಬೇಕೆಂದಾಗ ಅರ್ಜಿ ಹಾಕಿದರೂ ಅಧಿಕಾರಿಗಳು ಸ್ಪಂದಿಸಲಿಲ್ಲ. ಅನ್ಯಾಯದಿಂದ ಬೇಸತ್ತ ನನ್ನ ತಂದೆ, ಈ ಹೆಜ್ಜೆ ಇಟ್ಟಿದ್ದಾರೆ ಎಂದು ಆರೋಪಿಸಿದ್ದಾರೆ.

## ಬಾಲಕಿಯರ ಹಾಸ್ಟೆಲ್‌ಗೆ ನುಗ್ಗಿ ಬಟ್ಟೆ ಮುಟ್ಟಿದ ಯುವಕನ ಅಸಭ್ಯ ಕೃತ್ಯ



**ಚಿಕ್ಕಬಳ್ಳಾಪುರ:** ನಗರದಲ್ಲಿ ನಡೆದಿರುವ ಒಂದು ವಿಚಿತ್ರ ಮತ್ತು ಅಸಭ್ಯ ಘಟನೆಯು ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ. ಅಂಬೇಡ್ಕರ್ ಬಾಲಕಿಯರ ವಸತಿ ನಿಲಯದ ಸಿಸಿಟಿವಿ ದೃಶ್ಯಾವಳಿಗಳು ವೈರಲ್ ಆಗುತ್ತಿದ್ದು, ಜನರ ಕೋಪಕ್ಕೆ ಕಾರಣವಾಗಿವೆ.

ಮಾಹಿತಿ ಪ್ರಕಾರ, ಈ ಘಟನೆ ರಾತ್ರಿ ವೇಳೆ ಸಂಭವಿಸಿದ್ದು, ವಡ್ರೇಪಾಳ್ಯ ಮೂಲದ ಚೇತನ್ ಎಂಬ ಯುವಕ ನಿಷೇಧಿತ ಸಮಯದಲ್ಲಿ ಬಾಲಕಿಯರ ವಸತಿ ನಿಲಯಕ್ಕೆ ಅಕ್ರಮವಾಗಿ ಪ್ರವೇಶಿಸಿದ್ದಾನೆ. ಆತನ ಈ ವರ್ತನೆ ಸಿಸಿಟಿವಿ ಕ್ಯಾಮೆರಾಗಳಲ್ಲಿ ಸ್ಪಷ್ಟವಾಗಿ ದಾಖಲಾಗಿದ್ದು, ಅವನು ಹಾಸ್ಟೆಲ್ ಒಳಗೆ ನುಗ್ಗಿ, ಬಾಲಕಿಯರ ಬಟ್ಟೆಗಳನ್ನು ಮುಟ್ಟಿ, ವಾಸನೆ ನೋಡಿ ಅಸಭ್ಯ ವರ್ತನೆ ತೋರಿಸುತ್ತಿರುವುದನ್ನು ದೃಶ್ಯಾವಳಿ ಪೂರ್ತಿಯಾಗಿ ತೋರಿಸುತ್ತದೆ.

ಸಿಸಿಟಿವಿ ದೃಶ್ಯಗಳು ಹೊರಬಂದ ನಂತರ, ವಸತಿ ನಿಲಯದ ವಾರ್ಡನ್ ಕೂಡಲೇ ಘಟನೆಯ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿದ್ದು, ಅಧಿಕೃತವಾಗಿ ದೂರು ದಾಖಲಿಸಿದ್ದಾರೆ. ಈ ದೂರು ಆಧಾರದಲ್ಲಿ ಚಿಕ್ಕಬಳ್ಳಾಪುರ ನಗರ ಪೊಲೀಸ್ ಠಾಣೆಯ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಆರೋಪಿ ಚೇತನ್‌ನ್ನು ಬಂಧಿಸಿದ್ದಾರೆ.

ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಪೊಲೀಸರು, ಹಾಸ್ಟೆಲ್ ಭದ್ರತಾ ವ್ಯವಸ್ಥೆ, ಸಿಸಿಟಿವಿ ವ್ಯವಸ್ಥೆಯ ದೌರ್ಬಲ್ಯ ಮತ್ತು ಅಂತರಂಗದ ಸಿಬ್ಬಂದಿಯ ನಿರ್ಲಕ್ಷ್ಯದ ಕುರಿತೂ ತನಿಖೆ ಆರಂಭಿಸಿದ್ದಾರೆ.

ಈ ಘಟನೆ ಸಾಮಾಜಿಕ ಮಾಧ್ಯಮಗಳಲ್ಲಿ ವ್ಯಾಪಕವಾಗಿ ಹಂಚಲ್ಪಟ್ಟಿದ್ದು, ವಿದ್ಯಾರ್ಥಿನಿಯರ ಭದ್ರತೆ ಕುರಿತ ಚಿಂತನೆಗಳು ಮತ್ತೊಮ್ಮೆ ಎದ್ದಿವೆ. ಸ್ಥಳೀಯರು ಮತ್ತು ಪೋಷಕರು ಸರ್ಕಾರದಿಂದ ಕಟ್ಟುನಿಟ್ಟಿನ ಕ್ರಮ ಹಾಗೂ ವಸತಿ ನಿಲಯಗಳಲ್ಲಿ ಹೆಚ್ಚುವರಿ ಭದ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ಪೊಲೀಸರು ಈ ಪ್ರಕರಣದ ತನಿಖೆಯನ್ನು ಮುಂದುವರೆಸುತ್ತಿದ್ದು, ಆರೋಪಿಯ ಹಿನ್ನಲೆ ಮತ್ತು ಉದ್ದೇಶಗಳ ಕುರಿತು ಹೆಚ್ಚಿನ ಮಾಹಿತಿಯನ್ನು ಸಂಗ್ರಹಿಸುತ್ತಿದ್ದಾರೆ.

## ತುಪ್ಪದ ಬೆಲೆ ಹೆಚ್ಚಳ, ಜನತೆಗೆ ಮತ್ತೆ ದರ ಏರಿಕೆ ಶಾಕ್ ಕೊಟ್ಟ ಕೆಎಂಎಫ್




**ಬೆಂಗಳೂರು:** ಕರ್ನಾಟಕ ಜನತೆಗೆ ಕೆಎಂಎಫ್ (KMF) ಮತ್ತೆ ದರ ಏರಿಕೆಯ ಶಾಕ್ ನೀಡಿದೆ. ನಂದಿನಿ ತುಪ್ಪದ (Nandini Ghee) ದರ ಪ್ರತಿ ಲೀಟರ್‌ಗೆ 90 ರೂಪಾಯಿ ಏರಿಕೆ ಮಾಡಿದೆ. ಇತ್ತೀಚಿಗಷ್ಟೇ ಜಿಎಸ್‌ಟಿ ದರ ಇಳಿಕೆಯಾದ ನಂತರ ಗ್ರಾಹಕರಿಗೆ ಗುಡ್ ನ್ಯೂಸ್ ನೀಡಿದ್ದ ಕೆಎಂಎಫ್ ದರ ಇಳಿಕೆ ಮಾಡಿತ್ತು. ನಂದಿನಿ ತುಪ್ಪದ ಬೆಲೆ (Nandini Ghee Price) ಲೀಟರ್‌ಗೆ 40 ರೂ. ಇಳಿಕೆ ಮಾಡಿತ್ತು. ಆದರೆ, ಇದೀಗ ತುಪ್ಪಕ್ಕೆ ಬೇಡಿಕೆ ಹೆಚ್ಚಾದ ಬೆನ್ನಲ್ಲೇ ದಿಢೀರ್ ಆಗಿ ದರ ಏರಿಕೆ ಮಾಡಿದೆ.

ಇತ್ತೀಚಿಗಷ್ಟೇ ಜಿಎಸ್‌ಟಿ ದರ ಇಳಿಕೆಯಾದ ನಂತರ ಗ್ರಾಹಕರಿಗೆ ಗುಡ್ ನ್ಯೂಸ್ ನೀಡಿದ್ದ ಕೆಎಂಎಫ್ ದರ ಇಳಿಕೆ ಮಾಡಿತ್ತು. ನಂದಿನಿ ತುಪ್ಪದ ಬೆಲೆ ಲೀಟರ್‌ಗೆ 40 ರೂ. ಇಳಿಕೆ ಮಾಡಿತ್ತು. ಆದರೆ, ಇದೀಗ ತುಪ್ಪಕ್ಕೆ ಬೇಡಿಕೆ ಹೆಚ್ಚಾದ ಬೆನ್ನಲ್ಲೇ ದಿಢೀರ್ ಆಗಿ ದರ ಏರಿಕೆ ಮಾಡಿದೆ.

**ನಂದಿನಿ ತುಪ್ಪದ ಬೆಲೆ ಎಷ್ಟು?**

ಒಂದು ಲೀಟರ್ ನಂದಿನಿ ತುಪ್ಪಕ್ಕೆ ಈಗ 700 ರೂಪಾಯಿ ದರ ನಿಗದಿ ಮಾಡಲಾಗಿದೆ. ಈ ಮೊದಲು ಮೊದಲು 610 ರೂಗೆ ಒಂದು ಲೀಟರ್ ತುಪ್ಪ ಮಾರಾಟ ಮಾಡಲಾಗುತ್ತಿತ್ತು. ಜಿಎಸ್‌ಟಿ ಸುಧಾರಣೆ ಬಳಿಕ 40 ರೂಪಾಯಿ ಇಳಿಕೆ ಮಾಡಲಾಗಿತ್ತು. ಜಾಗತಿಕ ಮಾರುಕಟ್ಟೆಯಲ್ಲಿ ದರ ಏರಿಕೆ ಹಿನ್ನೆಲೆ ದಿಢೀರ್ ಬೆಲೆ ಹೆಚ್ಚಳ ಮಾಡಲಾಗಿದೆ ಎಂದು ಕೆಎಂಎಫ್ ತಿಳಿಸಿದೆ.

**ನಂದಿನಿ ತುಪ್ಪದ ಪರಿಷ್ಕೃತ ದರ ಇಂದಿನಿಂದಲೇ ಜಾರಿ**

ನಂದಿನಿ ತುಪ್ಪದ ಪರಿಷ್ಕೃತ ದರ ಇಂದಿನಿಂದಲೇ ಜಾರಿಯಾಗುತ್ತಿದೆ ಎಂದು ಕೆಎಂಎಫ್ ತಿಳಿಸಿದೆ.

**ನಂದಿನಿ ತುಪ್ಪದ ಬೆಲೆ (ರೂಪಾಯಿಗಳಲ್ಲಿ)**

**50 ಎಂಎಲ್ – 47**

**100 ಎಂಎಲ್ – 75**

**200 ಎಂಎಲ್ – 155-165**

**500 ಎಂಎಲ್ – 350-360**

**1 ಲೀಟರ್ (1000 ಎಂಎಲ್) – 700-720**

2017 ರಲ್ಲಿ ಹಾಲಿನ ಉತ್ಪನ್ನಗಳ ಮೇಲೆ ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ವಿಧಿಸಲಾಗಿತ್ತು. ಆ ನಂತರದಲ್ಲಿ 2022 ರಲ್ಲಿ ಜಿಎಸ್‌ಟಿ ಪ್ರಮಾಣವನ್ನು ಶೇಕಡಾ 22ಕ್ಕೆ ಏರಿಕೆ ಮಾಡಲಾಗಿತ್ತು. ಆದರೆ ಸೆಪ್ಟೆಂಬರ್‌ನಲ್ಲಿ ಕೇಂದ್ರ ಸರ್ಕಾರ ಹಾಲಿನ ಉತ್ಪನ್ನಗಳ ಮೇಲಿನ ಸರಕು ಸೇವಾ ತೆರಿಗೆಯನ್ನು ಶೇ 12ರಿಂದ 5ಕ್ಕೆ ಇಳಿಕೆ ಮಾಡಿದ್ದು, ಸೆಪ್ಟೆಂಬರ್ 22ರಿಂದ ಜಾರಿಗೆ ಬಂದಿದೆ. ಈ ಪ್ರಯೋಜನವನ್ನು ಗ್ರಾಹಕರಿಗೆ ವರ್ಗಾಯಿಸಬೇಕು ಎಂದು ಕೇಂದ್ರ ಸರ್ಕಾರ ರಾಜ್ಯಗಳಿಗೆ ಸೂಚಿಸಿತ್ತು. ಆ ಬಳಿಕ ರಾಜ್ಯದಲ್ಲಿ ಹಾಲಿನ ಉತ್ಪನ್ನಗಳ ಬೆಲೆ ಇಳಿಕೆ ಮಾಡಲಾಗಿತ್ತು. ಆದರೆ, ಇದೀಗ ಮತ್ತೆ ತುಪ್ಪದ ದರ ಏರಿಕೆಯಾಗಿದೆ.

## ಸರಕು ಸಾಗಾಟ ವಿಮಾನ ಪತನ: ಮೂವರು ಸಾವು



ಅಮೆರಿಕದ ಕೆಂಟುಕಿ ರಾಜ್ಯದ ಲೂಯಿಸ್‌ವಿಲ್ಲೆಯ ಮುಹಮ್ಮದ್ ಅಲಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಮಂಗಳವಾರ ಸಂಜೆ ಭಯಾನಕ ಅಪಘಾತ ನಡೆದಿದೆ. ಯುನೈಟೆಡ್ ಪಾರ್ಸೆಲ್ ಸರ್ವೀಸ್ (ಯುಪಿಎಸ್) ಸರಕು ವಿಮಾನವೊಂದು ಟೇಕ್‌ಆಫ್ ಸಮಯದಲ್ಲಿ ನಿಯಂತ್ರಣ ತಪ್ಪಿ ಸ್ಫೋಟಗೊಂಡು, ಕನಿಷ್ಠ ಮೂವರು ಸಾವನ್ನಪ್ಪಿದ್ದಾರೆ ಎಂದು ತಿಳಿದುಬಂದಿದೆ. ಆದರೆ ಸಾವಿನ ಸಂಖ್ಯೆ ಇನ್ನಷ್ಟು ಹೆಚ್ಚಾಗಬಹುದು ಎಂಬ ಆತಂಕ ವ್ಯಕ್ತವಾಗಿದೆ. ಕನಿಷ್ಠ 11 ಜನರು ಗಾಯಗೊಂಡಿದ್ದು, ಅವರಲ್ಲಿ ಕೆಲವರ ಸ್ಥಿತಿ ಚಿಂತಾಜನಕವಾಗಿದೆ ಎಂದು ಕೆಂಟುಕಿ ಗವರ್ನರ್ ಆಂಡಿ ಬೆಶಿಯರ್ ತಿಳಿಸಿದ್ದಾರೆ.

ಅಪಘಾತ ಸಂಜೆ 5:15ರ ಸುಮಾರು ನಡೆದಿದೆ. ಹವಾಯಿಯ ಹೊನೊಲುಲುಗೆ ಹೊರಡುತ್ತಿದ್ದ ಯುಪಿಎಸ್ ಕಾರ್ಗೋ ವಿಮಾನವು ರನ್‌ವೇಯಲ್ಲಿ ಚಲಿಸುತ್ತಿದ್ದಾಗ ಎಡ ರೆಕ್ಕೆಯಲ್ಲಿ ಜ್ವಾಲೆಗಳು ಮತ್ತು ದಟ್ಟ ಹೊಗೆ ಕಾಣಿಸಿಕೊಂಡವು. ಕ್ಷಣಾರ್ಧದಲ್ಲಿ ವಿಮಾನ ನೆಲದಿಂದ ಸ್ವಲ್ಪ ಎತ್ತರಕ್ಕೆ ಏರಿತು. ಆದರೆ ನಿಯಂತ್ರಣ ತಪ್ಪಿ ದೊಡ್ಡ ಬೆಂಕಿಯ ಚೆಂಡಿನಂತೆ ನೆಲಕ್ಕೆ ಅಪ್ಪಳಿಸಿತು ಮತ್ತು ಭೀಕರ ಸ್ಫೋಟ ಸಂಭವಿಸಿತು. ಈ ದೃಶ್ಯವನ್ನು ಸೆರೆಹಿಡಿದ ವೀಡಿಯೊಗಳು ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿವೆ. ರನ್‌ವೇಯ ಕೊನೆಯಲ್ಲಿರುವ ಕಟ್ಟಡದ ಛಾವಣಿ ಸಂಪೂರ್ಣ ಚೂರುಚೂರಾಗಿದೆ.

ವಿಮಾನದಲ್ಲಿ ಮೂವರು ಸಿಬ್ಬಂದಿ ಮಾತ್ರ ಇದ್ದರು ಎಂದು ತಿಳಿದುಬಂದಿದೆ. ಅವರ ಸ್ಥಿತಿ ಬಗ್ಗೆ ಇನ್ನೂ ಸ್ಪಷ್ಟ ಮಾಹಿತಿ ಲಭ್ಯವಿಲ್ಲ. ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಷನ್ (ಎಫ್‌ಎಎ) ಘಟನೆಯ ತನಿಖೆ ಆರಂಭಿಸಿದ್ದು, ವಿಮಾನದ ಕಪ್ಪು ಪೆಟ್ಟಿಗೆಗಳನ್ನು ಪತ್ತೆಹಚ್ಚುವ ಪ್ರಯತ್ನ ನಡೆಯುತ್ತಿದೆ. ತಾಂತ್ರಿಕ ದೋಷ, ಎಂಜಿನ್ ಸಮಸ್ಯೆ ಅಥವಾ ಪೈಲಟ್ ದೋಷ ಎಂಬುದು ತನಿಖೆಯ ನಂತರವೇ ತಿಳಿಯಲಿದೆ. ಅಪಘಾತದ ನಂತರ ವಿಮಾನ ನಿಲ್ದಾಣದ ಕಾರ್ಯಾಚರಣೆಗಳು ತಾತ್ಕಾಲಿಕವಾಗಿ ಸ್ಥಗಿತಗೊಂಡಿವೆ. ಇದರಿಂದ ಸಾವಿರಾರು ಪ್ಯಾಕೇಜ್‌ಗಳ ಸಾಗಾಣಿಕೆಯಲ್ಲಿ ವಿಳಂಬವಾಗುವ ಸಾಧ್ಯತೆಯಿದೆ.

ಗವರ್ನರ್ ಬೆಶಿಯರ್ ಅವರು ಸ್ಥಳಕ್ಕೆ ಭೇಟಿ ನೀಡಿ, ತುರ್ತು ತಂಡಗಳು ರಕ್ಷಣಾ ಕಾರ್ಯಾಚರಣೆ ನಡೆಸುತ್ತಿರುವುದಾಗಿ ತಿಳಿಸಿದರು. "ಕನಿಷ್ಠ ಮೂವರು ಸತ್ತಿದ್ದಾರೆ ಎಂದು ಭಾವಿಸಲಾಗಿದೆ. ಆದರೆ ಸಾವಿನ ಸಂಖ್ಯೆ ಹೆಚ್ಚಾಗಬಹುದು. 11 ಜನರು ಗಾಯಗೊಂಡಿದ್ದು, ಕೆಲವರ ಸ್ಥಿತಿ ಗಂಭೀರವಾಗಿದೆ" ಎಂದು ಅವರು ಹೇಳಿದರು. ಆಸ್ಪತ್ರೆಗಳಲ್ಲಿ ಗಾಯಾಳುಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಅಗ್ನಿಶಾಮಕ ದಳ ಮತ್ತು ತುರ್ತು ಸೇವಾ ತಂಡಗಳು ಸ್ಥಳದಲ್ಲಿ ಕಾರ್ಯನಿರತವಾಗಿವೆ.

## ಬಿಸಿನೀರಿನ ಡಬ್ಬಿಗೆ ಬಿದ್ದು 7 ತಿಂಗಳ ಹಸುಗೂಸು ಸಾವು

**ಮಧುರೈ:** ಕೇವಲ ಏಳು ತಿಂಗಳ ವಯಸ್ಸಿನ ಒಂದು ಹಸುಗೂಸು ಬಿಸಿನೀರಿಗೆ ಬಿದ್ದು ಸಾವನ್ನಪ್ಪಿರುವ ಘಟನೆ ತಮಿಳುನಾಡಿನ ಮಧುರೈನಲ್ಲಿ ನಡೆದಿದೆ.ಸೇತುಪತಿ ಮತ್ತು ಅವರ ಪತ್ನಿ ವಿಜಯಲಕ್ಷ್ಮಿ ದಂಪತಿಯ ಏಳು ತಿಂಗಳ ಹಿಂದೆ ಜನಿಸಿದ್ದ ಹೆಣ್ಣು ಮಗುವೇ ಈ ದುರಂತದ ಬಲಿ.

ಘಟನೆ ನಡೆದಿದ್ದು ಮಧುರೈ ಜಿಲ್ಲೆಯ ಮಾಡಕುಲಂ ಅಕ್ಟೋಬರ್ 27ರಂದು, ವಿಜಯಲಕ್ಷ್ಮಿ ಅವರು ತಮ್ಮ ಕಿರುಮಗುವನ್ನು ಮನೆಯ ಮಂಚದ ಮೇಲೆ ಮಲಗಿಸಿ, ಅಡುಗೆಮನೆಯ ಕೆಲಸದಲ್ಲಿ ನಿರತರಾಗಿದ್ದರು. ಸ್ನಾನಕ್ಕೆ ಬೇಕಾದ ನೀರು ಕಾಯಿಸುವ ಸಲುವಾಗಿ ಅವರು ಅದೇ ಮಂಚದ ಪಕ್ಕದಲ್ಲಿ ವಾಟರ್ ಹೀಟರ್ (ಬಿಸಿನೀರಿನ ಡಬ್ಬಿ) ಇಟ್ಟಿದ್ದರು.

ಈ ಸಮಯದಲ್ಲಿ, ಮಂಚದ ಮೇಲೆ ಮಲಗಿದ್ದ ಸಣ್ಣ ಮಗು ಏನೋ ಕಾರಣಕ್ಕೆ ಚಲಿಸಿ, ಅಥವಾ ಹೊರಳಿ, ಆ ಬಿಸಿನೀರಿನ ಡಬ್ಬಿಯೊಳಗೆ ಬಿದ್ದಿರಬೇಕು. ತೀವ್ರವಾದ ಬೇನೆಯಿಂದ ಮಗು ಜೋರಾಗಿ ಕಿರಿಚಿಕೊಂಡು ಅಳಲಾರಂಭಿಸಿತು. ಮಗುವಿನ ಕಿರಚಾಟ ಕೇಳಿ ಗಾಬರಿಗೊಂಡ ಅಮ್ಮ ಓಡಿ ಬಂದಾಗ, ಮಗು ಬಿಸಿನೀರಿನ ಡಬ್ಬಿಯಲ್ಲಿ ಸಿಕ್ಕಿಹಾಕಿಕೊಂಡಿದ್ದನ್ನು ನೋಡಿ ಆಘಾತಕ್ಕೊಳಗಾದರು. ಅಕ್ಕಪಕ್ಕದ ಮನೆಯವರು ಸಹ ಧಾವಿಸಿ ಬಂದರು. ತಕ್ಷಣವೇ ಮಗುವನ್ನು ಹೊರತೆಗೆದು ಸಮೀಪದ ಖಾಸಗಿ ಆಸ್ಪತ್ರೆಗೆ ಕರೆದೊಯ್ಯಲಾಯಿತು.

ಆಸ್ಪತ್ರೆಯ ವೈದ್ಯರು ಮಗುವಿಗೆ ತುರ್ತು ಚಿಕಿತ್ಸೆ ನೀಡಲು ಪ್ರಾರಂಭಿಸಿದರು. ಬಿಸಿನೀರಿನ ಸೋಕಿನಿಂದ ಮಗುವಿನ ದೇಹದ ಬಹುಭಾಗ ಗಂಭೀರವಾಗಿ ಸುಟ್ಟುಹೋಗಿತ್ತು. ಆಘಾತ ಮತ್ತು ನೋವಿನಿಂದಾಗಿ ಮಗುವಿನ ಸ್ಥಿತಿ ಅತ್ಯಂತ ಕಷ್ಟಕರವಾಗಿತ್ತು. ವೈದ್ಯರು ಮಗುವನ್ನು ಜೀವಂತವಾಗಿರಿಸಲು ಹೋರಾಡಿದರು , ದುರದೃಷ್ಟವಶಾತ್, ಚಿಕಿತ್ಸೆ ಯಶಸ್ವಿಯಾಗದೇ ಮಗು ಸಾವನ್ನಪ್ಪಿದೆ.

ಮಗುವಿನ ಮರಣದ ನಂತರ, ಸ್ಥಳೀಯ ಪೊಲೀಸ್ ಠಾಣೆ ಈ ಘಟನೆಗೆ ಸಂಬಂಧಿಸಿದಂತೆ ಪ್ರಕರಣ ದಾಖಲು ಮಾಡಿದೆ. ಮಗುವಿನ ತಾಯಿ ವಿಜಯಲಕ್ಷ್ಮಿ ಅವರ ವಿರುದ್ಧ ವಿಚಾರಣೆ ನಡೆಸಲಾಗುತ್ತಿದೆ. ಪೊಲೀಸ್ ತನಿಖೆಯ ಪ್ರಕಾರ, ಮಗುವಿನ ಸುರಕ್ಷತೆ ಬಗ್ಗೆ ಅಗತ್ಯ ಜಾಗರೂಕತೆ ವಹಿಸದೇ ಇದ್ದ ಕಾರಣ ಈ ದುರಂತ ಸಂಭವಿಸಿದೆ ಎಂಬುದು ಪ್ರಾಥಮಿಕ ತನಿಖೆಯಲ್ಲಿ ಬಂದಿದೆ. ಈ ಘಟನೆಯು ಪ್ರತಿ ತಂದೆ ತಾಯಿಗೆ ಒಂದು ಮಹತ್ವದ ಎಚ್ಚರಿಕೆಯಾಗಿದೆ. ಸಣ್ಣ ಮಕ್ಕಳಿರುವ ಮನೆಗಳಲ್ಲಿ ಸುರಕ್ಷತೆಗೆ ಹೆಚ್ಚಿನ ಗಮನ ಕೊಡಬೇಕು. ಕುದಿಯುವ ನೀರು, ವಿದ್ಯುತ್ ಸಾಧನಗಳು, ಔಷಧಿಗಳು, ಮತ್ತು ಚೂಪಾದ ವಸ್ತುಗಳು ಮಕ್ಕಳಿಗೆ ಸುಲಭವಾಗಿ ತಲುಪುವ ಸ್ಥಳಗಳಲ್ಲಿ ಇರಕೂಡದು. ಒಂದು ಕ್ಷಣದ ಅಜಾಗರೂಕತೆ ಕುಟುಂಬದ ಜೀವನವನ್ನೇ ಮುಳುಗಿಸಬಹುದು. ಮಗುವಿನ ಕುಟುಂಬವು ತೀವ್ರ ದುಃಖ ಮತ್ತು ಆಘಾತದಿಂದ ಈಗ ಹೊರಬರಲು ಹೋರಾಡುತ್ತಿದೆ. ಪೊಲೀಸರು ಪೋಷಕರಿಗೆ ಎಚ್ಚರಿಕೆ ಇರಲು ಸಲಹೆ ನೀಡಿದ್ದಾರೆ.

## ಗುಜರಾತ್ ಆಸ್ಪತ್ರೆಯ ಸಿಸಿಟಿವಿ ಹ್ಯಾಕ್:
### ಸ್ತ್ರೀರೋಗ ವಿಭಾಗದ ಖಾಸಗಿ ದೃಶ್ಯಗಳು ಪೋರ್ನ್ ಸೈಟ್‌ಗೆ



**ನವದೆಹಲಿ:** ದೇಶದಲ್ಲಿ ಸೈಬರ್ ಭದ್ರತೆಯ ದುರ್ಬಲತೆಯನ್ನು ಬಯಲುಮಾಡುವ ಆಘಾತಕಾರಿ ಘಟನೆಯೊಂದು ಬೆಳಕಿಗೆ ಬಂದಿದೆ. ಗುಜರಾತ್‌ನ ಒಂದು ಆಸ್ಪತ್ರೆಯ ಸ್ತ್ರೀರೋಗ ಶಾಸ್ತ್ರ ವಿಭಾಗದ ಸಿಸಿಟಿವಿ ಕ್ಯಾಮೆರಾಗಳ ದೃಶ್ಯಗಳು ಅಂತಾರಾಷ್ಟ್ರೀಯ ಪೋರ್ನ್ (ನೀಲಿಚಿತ್ರ) ತಾಣಗಳಲ್ಲಿ ಬಹಿರಂಗಗೊಂಡಿವೆ. ಈ ಘಟನೆಯು ಮಹಿಳೆಯರ ಖಾಸಗಿ ಗೌಪ್ಯತೆಯನ್ನು ಗಂಭೀರವಾಗಿ ಉಲ್ಲಂಘಿಸಿದ್ದು, ಸೈಬರ್ ಅಪರಾಧಿಗಳ ಈ ಕೃತ್ಯಕ್ಕೆ ದುರ್ಬಲ ಪಾಸ್‌ವರ್ಡ್‌ಗಳೇ ಮುಖ್ಯ ಕಾರಣವೆಂದು ತನಿಖೆಯಲ್ಲಿ ತಿಳಿದುಬಂದಿದೆ.

ಹ್ಯಾಕರ್‌ಗಳು ಆಸ್ಪತ್ರೆಯ ಸಿಸಿಟಿವಿ ಸಿಸ್ಟಂನ ಪಾಸ್‌ವರ್ಡ್ 'admin123' ಎಂಬ ಸರಳವಾದ ಪದವನ್ನು ಕಂಡುಹಿಡಿದು, ಹ್ಯಾಕ್ ಮಾಡಲಾಗಿದೆ. ಇದರಿಂದಾಗಿ ವೈದ್ಯರು ಮಹಿಳೆಯರಿಗೆ ತಪಾಸಣೆ ಮತ್ತು ಚಿಕಿತ್ಸೆ ನೀಡುತ್ತಿರುವ ಖಾಸಗಿ ದೃಶ್ಯಗಳು ಹ್ಯಾಕರ್‌ಗಳ ಕೈಗೆ ಸಿಕ್ಕಿವೆ. ಈ ದೃಶ್ಯಗಳನ್ನು ಅವರು ವಿವಿಧ ಅಂತಾರಾಷ್ಟ್ರೀಯ ಪೋರ್ನ್ ತಾಣಗಳಲ್ಲಿ ಅಪ್‌ಲೋಡ್ ಮಾಡಿ, ಲಕ್ಷಾಂತರ ಜನರಿಗೆ ಲಭ್ಯವಾಗುವಂತೆ ಮಾಡಿದ್ದಾರೆ. ಈ ಕೃತ್ಯ 2024ರ ಜನವರಿಯಿಂದ ಡಿಸೆಂಬರ್ ವರೆಗೆ ಸುಮಾರು 9 ತಿಂಗಳುಗಳ ಕಾಲ ನಡೆದಿದ್ದು, ಈ ಅವಧಿಯಲ್ಲಿ 80 ಸಿಸಿಟಿವಿ ಕ್ಯಾಮೆರಾಗಳಿಂದ ಸುಮಾರು 50,000ಕ್ಕೂ ಹೆಚ್ಚು ದೃಶ್ಯಗಳನ್ನು ಕದ್ದಿದ್ದಾರೆ.

ಕೇವಲ ಗುಜರಾತ್‌ನ ಆಸ್ಪತ್ರೆಗೆ ಮಾತ್ರ ಸೀಮಿತವಲ್ಲ ಈ ದಾಳಿ. ದೆಹಲಿ, ಪುಣೆ, ನಾಸಿಕ್, ಮುಂಬೈ, ಸೂರತ್, ಅಹಮದಾಬಾದ್ ಸೇರಿದಂತೆ ದೇಶದ 20 ರಾಜ್ಯಗಳಲ್ಲಿ ಆಸ್ಪತ್ರೆಗಳು, ಶಾಲೆಗಳು, ಕಚೇರಿಗಳು, ಕಾರ್ಖಾನೆಗಳು ಮತ್ತು ಕೆಲವು ಮನೆಗಳ ಸಿಸಿಟಿವಿ ದೃಶ್ಯಗಳು ಹ್ಯಾಕರ್‌ಗಳ ಕೈಗೆ ಸಿಕ್ಕಿವೆ. ಈ ದೃಶ್ಯಗಳನ್ನು ಯೂಟ್ಯೂಬ್ ಮತ್ತು ಟೆಲಿಗ್ರಾಮ್ ಚಾನಲ್‌ಗಳಲ್ಲಿಯೂ ಅಪ್‌ಲೋಡ್ ಮಾಡಲಾಗಿದೆ. ಇದರಿಂದ ಮಹಿಳೆಯರ ಗೌಪ್ಯತೆಯ ಜೊತೆಗೆ ಮಕ್ಕಳು, ಉದ್ಯೋಗಿಗಳು ಮತ್ತು ಸಾಮಾನ್ಯ ನಾಗರಿಕರ ಖಾಸಗಿ ಜೀವನಕ್ಕೂ ಧಕ್ಕೆ ಬಂದಿದೆ.

ತಜ್ಞರು ಹೇಳುವ ಪ್ರಕಾರ, ದುರ್ಬಲ ಪಾಸ್‌ವರ್ಡ್‌ಗಳು ಸೈಬರ್ ದಾಳಿಗಳ ಮುಖ್ಯ ಬಾಗಿಲಾಗಿವೆ. 'admin123' ನಂತಹ ಸರಳ ಪಾಸ್‌ವರ್ಡ್‌ಗಳನ್ನು ಬಳಸುವುದು ಹ್ಯಾಕರ್‌ಗಳಿಗೆ ಸುಲಭವಾಗಿ ವ್ಯವಸ್ಥೆಯನ್ನು ನುಗ್ಗಲು ಅವಕಾಶ ನೀಡುತ್ತದೆ. ಆಸ್ಪತ್ರೆಗಳಂತಹ ಸಂವೇದನಾಶೀಲ ಸ್ಥಳಗಳಲ್ಲಿ ಸಿಸಿಟಿವಿ ಸಿಸ್ಟಂಗಳನ್ನು ಆಧುನಿಕ ಭದ್ರತಾ ವ್ಯವಸ್ಥೆಗಳೊಂದಿಗೆ ಅಪ್‌ಡೇಟ್ ಮಾಡದಿರುವುದು ಈ ಘಟನೆಗೆ ಕಾರಣವಾಗಿದೆ. ಸರ್ಕಾರಿ ಮತ್ತು ಖಾಸಗಿ ಸಂಸ್ಥೆಗಳು ತಮ್ಮ ಡಿಜಿಟಲ್ ಭದ್ರತೆಯನ್ನು ಬಲಪಡಿಸಬೇಕು ಎಂದು ತಜ್ಞರು ಎಚ್ಚರಿಕೆ ನೀಡಿದ್ದಾರೆ. ಐಟಿ ಕಾಯ್ದೆಯಡಿ ಹ್ಯಾಕಿಂಗ್, ಗೌಪ್ಯತೆ ಉಲ್ಲಂಘನೆಗೆ ಕಠಿಣ ಶಿಕ್ಷೆಯಿದ್ದರೂ, ಅಪರಾಧಿಗಳನ್ನು ಪತ್ತೆಹಚ್ಚುವುದು ಸವಾಲಾಗಿದೆ. ಪೊಲೀಸರು ಈಗಾಗಲೇ ತನಿಖೆ ಆರಂಭಿಸಿದ್ದು, ಹ್ಯಾಕರ್‌ಗಳನ್ನು ಬಂಧಿಸಲು ಅಂತಾರಾಷ್ಟ್ರೀಯ ಸಹಕಾರ ಕೋರಿದ್ದಾರೆ. ಆದರೆ, ಸೋರಿಕೆಯಾದ ದೃಶ್ಯಗಳನ್ನು ಸಂಪೂರ್ಣವಾಗಿ ತೆಗೆದುಹಾಕುವುದು ಅಸಾಧ್ಯವೆನಿಸಿದೆ.

## ಗುರುನಾನಕ್ ಜಯಂತಿಗೆ ಭಾರತದ 14 ಹಿಂದೂಗಳಿಗೆ ಪ್ರವೇಶ ನಿರಾಕರಿಸಿದ ಪಾಕಿಸ್ತಾನ



**ನವದೆಹಲಿ:** ಸಿಖ್ ಧರ್ಮದ ಸಂಸ್ಥಾಪಕ ಗುರುನಾನಕ್ ಅವರ 556ನೇ ಜನ್ಮ ದಿನಾಚರಣೆಯನ್ನು ಆಚರಿಸಲು ಅವರ ಜನ್ಮಸ್ಥಳವಾದ ನಂಕಾನಾ ಸಾಹಿಬ್‌ಗೆ ಪ್ರಯಾಣಿಸುವ ಯಾತ್ರಿಕರ ಗುಂಪಿನಲ್ಲಿದ್ದ 14 ಭಾರತೀಯ ಹಿಂದೂಗಳಿಗೆ ಪಾಕಿಸ್ತಾನದಲ್ಲಿ ಪ್ರವೇಶ ನಿರಾಕರಿಸಲಾಗಿದೆ. ಪಾಕಿಸ್ತಾನದ ಅಧಿಕಾರಿಗಳು ಅವರು ಸಿಖ್ಖರಲ್ಲ, ಹಿಂದೂಗಳು ಎಂಬ ಕಾರಣಕ್ಕೆ ಪ್ರವೇಶವನ್ನು ನಿರಾಕರಿಸಿ ವಾಪಾಸ್ ಕಳುಹಿಸಿದ್ದಾರೆ.

ಈ 14 ಜನರು ಕೇಂದ್ರ ಗೃಹ ಸಚಿವಾಲಯವು ಪಾಕಿಸ್ತಾನಕ್ಕೆ ಭೇಟಿ ನೀಡಲು ಅನುಮತಿ ನೀಡಿದ ಸುಮಾರು 2,100 ಜನರಲ್ಲಿ ಸೇರಿದ್ದರು. ಇಸ್ಲಾಮಾಬಾದ್ ಸರಿಸುಮಾರು ಅದೇ ಸಂಖ್ಯೆಯವರಿಗೆ ಪ್ರಯಾಣ ದಾಖಲೆಗಳನ್ನು ನೀಡಿತ್ತು. ಆದರೂ ಆ 14 ಜನರಿಗೆ ಪಾಕಿಸ್ತಾನದೊಳಗೆ ಪ್ರವೇಶಿಸಲು ಅನುಮತಿ ಸಿಕ್ಕಿಲ್ಲ. ಮಂಗಳವಾರ ಅಂದಾಜು 1,900 ಜನರು ವಾಘಾ ಗಡಿ ದಾಟಿ ಪಾಕಿಸ್ತಾನಕ್ಕೆ ಪ್ರವೇಶಿಸಿದ್ದಾರೆ. ಮೇ ತಿಂಗಳಲ್ಲಿ 4 ದಿನಗಳ ಕಾಲ ನಡೆದ ಮಿಲಿಟರಿ ಸಂಘರ್ಷವಾದ ಆಪರೇಷನ್ ಸಿಂಧೂರ್ ನಂತರ ಇದೇ ಮೊದಲ ಬಾರಿಗೆ ಪಾಕಿಸ್ತಾನದೊಳಗೆ ಇಷ್ಟು ದೊಡ್ಡ ಪ್ರಮಾಣದಲ್ಲಿ ಭಾರತೀಯರು ಪ್ರವೇಶಿಸಿದ್ದಾರೆ.

ಪಾಕಿಸ್ತಾನ ಇದೀಗ ವಾಪಾಸ್ ಕಳುಹಿಸಿದ 14 ಜನರಲ್ಲಿ ದೆಹಲಿ ಮತ್ತು ಲಕ್ನೋದ ಜನರು ಸೇರಿದ್ದಾರೆ. ಪಾಕ್ ಅಧಿಕಾರಿಗಳು ದಾಖಲೆಗಳಲ್ಲಿ ಸಿಖ್ ಎಂದು ನಮೂದಿಸಲಾದ ಜನರಿಗೆ ಮಾತ್ರ ಒಳಗೆ ಪ್ರವೇಶಿಸಲು ಅವಕಾಶ ನೀಡಲಾಗುವುದು ಎಂದು ಹೇಳಿದ ಬಳಿಕ ಆ ಹಿಂದೂಗಳೆಲ್ಲರೂ ಅವಮಾನಿತರಾಗಿ ಹಿಂತಿರುಗಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಇದಲ್ಲದೆ, ಸ್ವತಂತ್ರವಾಗಿ ವೀಸಾಕ್ಕಾಗಿ ಅರ್ಜಿ ಸಲ್ಲಿಸಿದ 300 ಜನರನ್ನು ಅಗತ್ಯ ಗೃಹ ಸಚಿವಾಲಯದ ಅನುಮೋದನೆ ಇಲ್ಲದ ಕಾರಣ ಗಡಿಯ ಭಾರತದ ಗಡಿಯಿಂದ ವಾಪಾಸ್ ಕಳುಹಿಸಲಾಗಿದೆ. ಗುರುನಾನಕ್ ಜಯಂತಿ ಸಮಾರಂಭವು ಇಂದು ಲಾಹೋರ್‌ನಿಂದ 80 ಕಿ.ಮೀ ದೂರದಲ್ಲಿರುವ ಗುರುದ್ವಾರದಲ್ಲಿ ನಡೆಯಲಿದೆ.

ಏಪ್ರಿಲ್ 22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ಮೇಲೆ ನಡೆದ ಭಯೋತ್ಪಾದಕ ದಾಳಿಗೆ ಭಾರತದ ಮಿಲಿಟರಿ ಪ್ರತಿಕ್ರಿಯೆಯಾಗಿ ಆಪರೇಷನ್ ಸಿಂಧೂರ್ ನಡೆಸಿದ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚಾಗಿದೆ.

## ಜೆಡಿಯು ನಾಯಕನ ಮನೇಲಿ ಮೂವರು ಅನುಮಾನಾಸ್ಪದ ಸಾವು


**ಪಾಟ್ನಾ:** ಬಿಹಾರದಲ್ಲಿ (Bihar) ಮತದಾನಕ್ಕೆ ಒಂದು ದಿನ ಬಾಕಿಯಿರುವಾಗಲೇ ಜೆಡಿಯು ನಾಯಕನ ಮನೆಯಲ್ಲಿ ಅನುಮಾನಾಸ್ಪದವಾಗಿ ಮೂವರು ಸಾವನ್ನಪ್ಪಿದ್ದಾರೆ.

ಜೆಡಿಯು ನಾಯಕ ನಿರಂಜನ್ ಕುಶ್ವಾಹ (Niranjan Kushwaha) ಅವರ ಕುಟುಂಬದ ಮೂವರು ಸದಸ್ಯರು ತಮ್ಮ ಮನೆಯಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ಮೃತರನ್ನು ನಿರಂಜನ್ ಅವರ ಹಿರಿಯ ಸಹೋದರ ನವೀನ್ ಕುಶ್ವಾಹ, ಅವರ ಪತ್ನಿ ಕಾಂಚನ್ ಮಾಲಾ ಸಿಂಗ್ ಮತ್ತು ಅವರ ಮಗಳು ತನು ಪ್ರಿಯಾ ಎಂದು ಗುರುತಿಸಲಾಗಿದೆ.

ಸದ್ಯ ಶವಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ. ಸಾವಿಗೆ ನಿಖರವಾದ ಕಾರಣ ಇನ್ನು ತಿಳಿದು ಬಂದಿಲ್ಲ. ಮೃತ ನವೀನ್ ಕುಶ್ವಾಹ ಹಿಂದೆ ವಿಧಾನಸಭೆ ಹಾಗೂ ಲೋಕಸಭೆ ಚುನಾವಣೆಗೆ ಸ್ಪರ್ಧಿಸಿದ್ದರು.

ನ.6ರಂದು ಬಿಹಾರದಲ್ಲಿ ಮೊದಲ ಹಂತದ ಚುನಾವಣೆ ನಡೆಯಲಿದೆ. 18 ಜಿಲ್ಲೆಗಳ 121 ವಿಧಾನಸಭೆ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಇಂಡಿಯಾ ಕೂಟದ ಸಿಎಂ ಅಭ್ಯರ್ಥಿ ತೇಜಸ್ವಿ ಯಾದವ್, ಎನ್‌ಡಿಎ ಆಡಳಿತ ಡಿಸಿಎಂಗಳಾದ ಸಾಮ್ರಾಟ್ ಚೌಧರಿ ಮತ್ತು ವಿಜಯ್ ಕುಮಾರ್ ಸೇರಿ ಅನೇಕರು ಕಣದಲ್ಲಿದ್ದಾರೆ. ಉಳಿದ 122 ಸ್ಥಾನಗಳಿಗೆ ನ.11ರಂದು ಮತದಾನ ನಡೆಯಲಿದ್ದು, ನ.14ರಂದು ಫಲಿತಾಂಶ ಪ್ರಕಟವಾಗಲಿದೆ.

## 50 ಗ್ರಾಂ ಚಿನ್ನ, ವಜ್ರದ ಉಂಗುರ ಕದ್ದಿದ್ದ ಮನೆಕೆಲಸದಾಕೆ



**ಬೆಂಗಳೂರು:** ಲಿಫ್ಟ್‌ನಲ್ಲಿ ನಾಯಿಮರಿ ಕೊಂದಿದ್ದ ಮನೆಕೆಲಸದಾಕೆ ಮೇಲೆ ಇದೀಗ ಮತ್ತೊಂದು ಎಫ್‌ಐಆರ್ (FIR) ದಾಖಲಾಗಿದೆ. ತಾನಿದ್ದ ಮನೆಯಲ್ಲೇ 50 ಗ್ರಾಂ ಚಿನ್ನ ಹಾಗೂ ವಜ್ರದ ಉಂಗುವೊಂದನ್ನು ಕಳ್ಳತನ ಮಾಡಿದ್ದಾಗಿ ತನಿಖೆ ವೇಳೆ ಒಪ್ಪಿಕೊಂಡಿದ್ದಾಳೆ.

ಬೆಂಗಳೂರಿನ ಬಾಗಲೂರಿನ (Bagaluru) ಅಪಾರ್ಟ್‌ಮೆಂಟ್‌ವೊಂದರಲ್ಲಿ ಲಿಫ್ಟ್‌ನಲ್ಲಿ ನಾಯಿಮರಿಯನ್ನು ಅಮಾನುಷವಾಗಿ ಹತ್ಯೆ ಮಾಡಿದ ಪ್ರಕರಣದ ಆರೋಪಿ ಪುಷ್ಪಲತಾ ಮೇಲೆ ಮನೆ ಮಾಲೀಕರಾದ ರಾಶಿಕಾ ಚಿನ್ನ ಕಳ್ಳತನ ಮಾಡಿದ್ದಾರೆಂದು ದೂರು ದಾಖಲಿಸಿದ್ದಾರೆ. ದೂರಿನ ಆಧಾರದ ಮೇಲೆ ಮತ್ತೊಂದು ಎಫ್‌ಐಆರ್ ದಾಖಲಾಗಿದೆ.ಇದನ್ನೂ ನ.2ರಂದು ಮನೆಯ ವಾರ್ಡ್‌ರೋಬ್‌ನಲ್ಲಿ ಇಟ್ಟಿದ್ದ ಚಿನ್ನಾಭರಣ ಕಾಣೆಯಾಗಿತ್ತು. ಸುಮಾರು 50 ಗ್ರಾಂ ಮೌಲ್ಯದ ಚಿನ್ನದ ಸರ, ಒಂದು ಉಂಗುರ ಹಾಗೂ ಒಂದು ವಜ್ರದ ಉಂಗುರ ಕಳುವಾಗಿತ್ತು ಎಂದು ದೂರಿನಲ್ಲಿ ತಿಳಿಸಲಾಗಿದೆ. ಮನೆಕೆಲಸದಾಕೆ ಪುಷ್ಪಲತಾ ಮೇಲೆ ಅನುಮಾನ ವ್ಯಕ್ತಪಡಿಸಿ ಪೊಲೀಸರು ವಿಚಾರಣೆ ನಡೆಸಿದಾಗ, ಆಕೆ ಕಳ್ಳತನ ಮಾಡಿದ್ದನ್ನು ಒಪ್ಪಿಕೊಂಡಿದ್ದಾಳೆ.

ಯುವತಿ ರಾಶಿಕಾ ಕಾಲೇಜಿಗೆ ಹೋದಾಗ ಪುಷ್ಪಲತಾ ಮನೆಯಲ್ಲಿ ಒಬ್ಬಳೇ ಇರುತ್ತಿದ್ದಳು. ಇದೇ ಸಮಯದಲ್ಲಿ ಡ್ರಾಯರ್‌ನಲ್ಲಿಟ್ಟಿದ್ದ ಚಿನ್ನಾಭರಣವನ್ನು ಕದ್ದು, ತಾನು ಮಲಗಿಕೊಳ್ಳುವ ಮಂಚದ ಕೆಳಗೆ ಬಚ್ಚಿಟ್ಟಿದ್ದಳು. ಕಳ್ಳತನವೆಸಗಿದ ಬಳಿಕ ಮನೆಯಲ್ಲಿದ್ದ ನಾಯಿಮರಿಯನ್ನು ಸಾಯಿಸಿದ್ದಳು ಎಂದು ತಿಳಿದುಬಂದಿದೆ.

ಬಾಗಲೂರು ಪೊಲೀಸ್ ಠಾಣೆಯಲ್ಲಿ ಎರಡು ಪ್ರತ್ಯೇಕ ಪ್ರಕರಣಗಳನ್ನು ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಮುಂದುವರಿಸಿದ್ದಾರೆ

**ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ: 9538786812 / 9880655634**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.